ಸಂಪುಟ : 10 ಸಂಚಿಕೆ: 133 ಪುಟ : 4+2 ಬೆಲೆ: 3.00 ಶನಿವಾರ ಜೂನ್ 28 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 133 Pages : 4+2 Price : 3.00 Saturday June 28 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಲಕ್ಷ್ಮೇಶ್ವರ; ಅವಾಸ್ ಯೋಜನೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರಕಾರದ ಪ್ರಧಾನಮಂತ್ರಿ ಅವಾಸ್ ನಗರ 2.0 ಯೋಜನೆಯಡಿ ವಸತಿ ರಹಿತ (ಕಚ್ಚಾ ಮನೆ ಹೊಂದಿರುವ) ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸಲು Unifide web portal ನಲ್ಲಿ ಅಹ್ವಾನಿಸಲಾಗಿದೆ.

ವಸತಿ ಸೌಲಭ್ಯ ಪಡೆಯಲು http//pmay.urban.gov.in ದಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 15 ಕೊನೆಯ ದಿನವಾಗಿದ್ದು , ಹೆಚ್ಚಿನ ಮಾಹಿತಿಗಾಗಿ ಲಕ್ಷ್ಮೇಶ್ವರ ಪುರಸಭೆಯ ವಸತಿ ವಿಭಾಗದ ಶಾಖೆಯಲ್ಲಿ ಸಂಪರ್ಕಿಸಬುಹುದಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಆಕ್ಷೇಪಣೆಗೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಲಕ್ಷ್ಮೇಶ್ವರ ಪುರಸಭೆಯ ಸಾರ್ವಜನಿಕರಿಗೆ ತಿಳಿಪಡಿಸುವುದೇನೆಂದರೆ, ಲಕ್ಷ್ಮೇಶ್ವರ ಪುರಸಭೆ ವ್ಯಾಪ್ತಿಯ ಹಿರೇಬಣದ ವಾರ್ಡ್ ನಂ.06 ರಲ್ಲಿ ಲಕ್ಷ್ಮಿ ದೇವಾಲಯದ ಹತ್ತಿರ ಇರುವ ವೃತ್ತಕ್ಕೆ ಅಮರಶಿಲ್ಪಿ ಜಕಣಾಚಾರ್ಯ ವೃತ್ತ ಅಂತಾ ನಾಮಕರಣ ಮಾಡಲು ದಿ:08-10-2024 ರಂದು ಜರುಗಿದ ಪುರಸಭೆಯ ಸಾಮಾನ್ಯ ಸಭೆಯಲ್ಲಿ ಠರಾವು ನಂ: 350 ರಲ್ಲಿ ತೀರ್ಮಾನಿಸಿದೆ. ಸದರಿ ವೃತ್ತಕ್ಕೆ ಅಮರಶಿಲ್ಪಿ ಜಕಣಾಚಾರ್ಯ ವೃತ್ತ ಅಂತಾ ನಾಮಕರಣ ಮಾಡಲು ಯಾರದಾದರೂ ಆಕ್ಷೇಪಣೆ ಇದ್ದಲ್ಲಿ ಈ ಪ್ರಕಟಣೆ ಪ್ರಕಟಗೊಂಡ 30 ದಿನ ಒಳಗಾಗಿ ಪುರಸಭೆಗೆ ಲಿಖಿತ ಮೂಲಕ ಆಕ್ಷೇಪಣೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಲಕ್ಷ್ಮೇಶ್ವರ ಪುರಸಭೆ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಅವಾಸ್ ಯೋಜನೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರಗುಂದ ಪುರಸಭೆ ವ್ಯಾಪ್ತಿಯಲ್ಲಿ ಕೇಂದ್ರ ಸರಕಾರದ ಪ್ರಧಾನಮಂತ್ರಿ ಅವಾಸ್ ನಗರ 2.0 ಯೋಜನೆಯಡಿ ವಸತಿ ರಹಿತ (ಕಚ್ಚಾ ಮನೆ ಹೊಂದಿರುವ) ಮತ್ತು ನಿವೇಶನ ರಹಿತ ಕುಟುಂಬಗಳಿಗೆ ವಸತಿ ಸೌಲಭ್ಯ ಕಲ್ಪಿಸಲು Unifide web portal ನಲ್ಲಿ ಅಹ್ವಾನಿಸಲಾಗಿದೆ.

ವಸತಿ ಸೌಲಭ್ಯ ಪಡೆಯಲು http//pmay.urban.gov.in ದಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 15 ಕೊನೆಯ ದಿನವಾಗಿದ್ದು , ಹೆಚ್ಚಿನ ಮಾಹಿತಿಗಾಗಿ ನರಗುಂದ ಪುರಸಭೆಯ ವಸತಿ ಶಾಖೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಡಿ.ಇ.ಎಲ್.ಇಡಿ / ಡಿ.ಪಿ.ಇಡಿ/ ಡಿ.ಪಿ.ಎಸ್.ಇ ಕೋರ್ಸಿನ ಸರಕಾರಿ ಕೋಟಾದ ಉಳಿಕೆ ಸೀಟುಗಳನ್ನು ದಾಖಲಾತಿ ಮಾಡಿಕೊಳ್ಳಲು ಜುಲೈ 5 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಾಲಾ ಶಿಕ್ಷಣ ವೆಬ್‌ಸೈಟ್‌ನಲ್ಲಿ ಸಂಪರ್ಕಿಸಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 7619277145 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

### ಡಂಬಳದಲ್ಲಿ ಪದಾಧಿಕಾರಿಗಳ ಪದಗ್ರಹಣ, ಅಭಿನಂದನಾ ಸಮಾರಂಭದಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಭವಿಷ್ಯ

# 2026ರಲ್ಲಿ ರಾಜ್ಯ ವಿಧಾನಸಭೆಗೆ ಮಧ್ಯಂತರ ಚುನಾವಣೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ತಾಲೂಕು ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗೂ ಮುಂಚೆಯೇ 2026ರಲ್ಲಿ ರಾಜ್ಯ ವಿಧಾನಸಭೆಗೆ ಮಧ್ಯಂತರ ಚುನಾವಣೆ ನಡೆಯಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಭವಿಷ್ಯ ನುಡಿದರು.

ಶುಕ್ರವಾರ ಮುಂಡರಗಿ ತಾಲೂಕಿನ ಡಂಬಳ ಗ್ರಾಮದ ಶ್ರೀ ಜಗದ್ಗುರು ತೋಂಟದಾರ್ಯ ಕಲಾ ಭವನದಲ್ಲಿ ಭಾರತೀಯ ಜನತಾ ಪಕ್ಷದ ರೋಣ ವಿಧಾನಸಭಾ ಮತಕ್ಷೇತ್ರದ ಡಂಬಳ ಮಂಡಲದ ವಿವಿಧ ಮೋರ್ಚಾಗಳ ಪದಾಧಿಕಾರಿಗಳ ಪದಗ್ರಹಣ ಹಾಗೂ ನಿಕಟಪೂರ್ವ ಪದಾಧಿಕಾರಿಗಳಿಗೆ ಏರ್ಪಡಿಸಿದ್ದ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಪಕ್ಷ ನಿಮ್ಮ ಮೇಲೆ ನಂಬಿಕೆ ಇಟ್ಟಿದೆ. ಬೂತ್ ಮಟ್ಟದಲ್ಲಿ ಪಕ್ಷವನ್ನು ಸಂಘಟಿಸಿ ಕೇಂದ್ರದ ಯೋಜನೆಗಳನ್ನು ಜನರಿಗೆ ತಲುಪಿಸುತ್ತೀರಿ ಎನ್ನುವ ವಿಶ್ವಾಸವಿದೆ. ರಾಜಕಾರಣ ವೇಗವಾಗಿ ಬದಲಾಗುತ್ತಿದೆ. ಕೇವಲ ಎರಡು ವರ್ಷದಲ್ಲಿ ಕಾಂಗ್ರೆಸ್ ವಿರುದ್ಧ ಜನತೆ ಬಂಡಾಯ ಎದ್ದಿದೆ. ನಮ್ಮ ಸರ್ಕಾರ ಇದ್ದಾಗ ರೈತರ ಮಕ್ಕಳಿಗೆ ತಂದಿದ್ದ ವಿದ್ಯಾನಿಧಿ ಯೋಜನೆಯನ್ನು ನಿಲ್ಲಿಸಿದರು. ರೈತರಿಗೆ ಡಿಸೆಲ್, ಪೈಪು, ಪಂಪ್‌ಸೆಟ್ ಸಬ್ಸಿಡಿಗಳನ್ನು ನಿಲ್ಲಿಸಿದರು. ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಸಿಗುತ್ತಿಲ್ಲ. ಆಸ್ಪತ್ರೆಯಲ್ಲಿ ಔಷಧ ಸಿಗುತ್ತಿಲ್ಲ. ರಾಜ್ಯದಲ್ಲಿ ಬಡವರ ವಿರೋಧಿ ಸರ್ಕಾರ ಇದೆ. ಎಲ್ಲದರಲ್ಲೂ ಭ್ರಷ್ಟಾಚಾರ ತುಂಬಿದೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಬಂದ ಮೇಲೆ ವಿದ್ಯುತ್ ದರ, ಪೆಟ್ರೋಲ್ ಬೆಲೆ, ಸ್ಟಾಂಪ್ ಡ್ಯೂಟಿ ಹೆಚ್ಚಳ ಮಾಡಿದರು. ಎರಡು ವರ್ಷದಲ್ಲಿ ಮೂರು ಲಕ್ಷ ಕೋಟಿಗೂ ಹೆಚ್ಚು ಸಾಲ ಮಾಡಿದ್ದಾರೆ. ಪ್ರತಿಯೊಬ್ಬರ ತಲೆಯ ಮೇಲೆ ಸಾಲ ಹೊರಿಸಿದ್ದಾರೆ. ರಾಜ್ಯವನ್ನು ದಿವಾಳಿ ಮಾಡಿದ್ದಾರೆ. ಇದರ ವಿರುದ್ಧ ನಾವು ಮಂಡಲ ಮಟ್ಟದಲ್ಲಿ ಜಾಗೃತಿ ಮೂಡಿಸಬೇಕು ಎಂದರು. ಇನ್ನೊಂದೆಡೆ ನಮ್ಮ ಕೇಂದ್ರ ಸರ್ಕಾರ ಸುಮಾರು 27 ಕೋಟಿ ಜನರನ್ನು ಬಡತನ ರೇಖೆಯಿಂದ ಮೇಲೆತ್ತಿದೆ. 60 ಕೋಟಿ ರೈತರ ಖಾತೆಗೆ ನೇರ ಹಣ ಹಾಕುತ್ತಿದ್ದಾರೆ. ಇಡೀ ಜಗತ್ತೇ ಮೆಚ್ಚುವಂತಹ ನೇತೃತ್ವ ನರೇಂದ್ರ ಮೋದಿಯವರದ್ದಾಗಿದೆ. ಕಾಂಗ್ರೆಸ್ ಸರ್ಕಾರ ಇದ್ದಾಗ ಬೆಂಗಳೂರು, ಹೈದರಾಬಾದ್, ಮುಂಬೈನಲ್ಲಿ ಬಾಂಬ್ ಹಾಕಿದ್ದರು. ಈಗ ಕಾಶ್ಮೀರದಲ್ಲಿ ಬಾಂಬ್ ಹಾಕಿದ್ದಕ್ಕೆ ಅವರ ನೆಲೆಯನ್ನೇ ಧ್ವಂಸ ಮಾಡಿ ಬಂದಿದ್ದಾರೆ. ನಮ್ಮ ದೇಶದಲ್ಲಿ ಗಟ್ಟಿಯಾದ ನಾಯಕತ್ವ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರೋಣ ವಿಧಾನಸಭಾ ಮತಕ್ಷೇತ್ರದ ಮಾಜಿ ಶಾಸಕ ಕಳಕಪ್ಪ ಬಂಡಿ, ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಡಂಬಳ ಮಂಡಲದ ಅಧ್ಯಕ್ಷ ಅಂದಪ್ಪ ಹಾರೋಗೇರಿ, ನಿಕಟಪೂರ್ವ ಅಧ್ಯಕ್ಷ ರವಿ ಕರಿಗಾರ, ರೋಣ ಮಂಡಲದ ಅಧ್ಯಕ್ಷ ಉಮೇಶ ಮಲ್ಲಾಪೂರ, ಮುಖಂಡರಾದ ಕರಬಸಪ್ಪ ಹಂಚಿನಾಳ, ವೆಂಕನಗೌಡ ಪಾಟೀಲ್ ಸೇರಿದಂತೆ ಪಕ್ಷದ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

> ತಾಲೂಕು ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗೂ ಮುಂಚೆ 2026ರಲ್ಲಿ ವಿಧಾನಸಭೆಗೆ ಮಧ್ಯಂತರ ಚುನಾವಣೆ ನಡೆಯಲಿದೆ. ನಾವೆಲ್ಲರೂ ಮತ್ತೊಮ್ಮೆ ಕಳಕಪ್ಪ ಬಂಡಿಯವರನ್ನು ಆಯ್ಕೆ ಮಾಡಬೇಕು. ಅದಕ್ಕಾಗಿ ಸಂಕಲ್ಪ ಮಾಡಿ ಪಣ ತೊಡೋಣ. ಭವಿಷ್ಯದದಲ್ಲಿ, ರಾಜ್ಯದಲ್ಲಿ ಮತ್ತೆ ಬಿಜೆಪಿಯ ದಿನಗಳು ಬರುತ್ತವೆ.
> – ಬಸವರಾಜ ಬೊಮ್ಮಾಯಿ.
> ಸಂಸದರು, ಹಾವೇರಿ-ಗದಗ.

### ಬಿಎಲ್‌ಓ ಕಾರ್ಯದಿಂದ ಮುಕ್ತಗೊಳಿಸಲು ಶಿಕ್ಷಕ ಸಂಘದ ಮನವಿ

# ಇಲಾಖೆಯ ಒತ್ತಡದ ಕೆಲಸಗಳು ಹೆಚ್ಚಾಗಿವೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಿಎಲ್‌ಓ ಕಾರ್ಯದಿಂದ ಶಿಕ್ಷಕರನ್ನು ಕೈಬಿಡಬೇಕೆಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಶುಕ್ರವಾರ ಪಟ್ಟಣದ ತಹಸೀಲ್ದಾರ ಕಚೇರಿಗೆ ತೆರಳಿ ಗ್ರೇಡ್-2 ತಹಸೀಲ್ದಾರ ಮಂಜುನಾಥ್ ಅಮಾಸಿ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪೂರ ಮತ್ತು ಕಾರ್ಯದರ್ಶಿ ಚಂದ್ರಕಾಂತ ನೇಕಾರ ಮಾತನಾಡಿ, ಕಂದಾಯ ಇಲಾಖೆ ನೀಡುವ ಚುನಾವಣೆ ಮತ್ತು ಇತರೆ ಕಾರ್ಯಗಳನ್ನು ಶಿಕ್ಷಕರು ಚಾಚೂ ತಪ್ಪದೇ ಮಾಡುತ್ತಿದ್ದಾರೆ.



ಆದರೆ ಈಗ ಶಿಕ್ಷಕರಿಗೆ ಶಿಕ್ಷಣ ಇಲಾಖೆಯ ಒತ್ತಡದ ಕೆಲಸಗಳು ಹೆಚ್ಚಾಗಿವೆ. ಶಾಲೆಗಳು ಆರಂಭಗೊಂಡಿದ್ದು, ಶಿಕ್ಷಕರು ಇದರಲ್ಲಿ ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳಬೇಕಿದೆ. ಅಲ್ಲದೆ ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆಯೂ ಸಾಕಷ್ಟಿದೆ.

ಇತರೆ ಇಲಾಖೆಯ ಕೆಲಸಗಳಿಂದ ಬೋಧನೆಗೆ ಸಮಯವೇ ಸಿಗುತ್ತಿಲ್ಲ. ಇದು ಮಕ್ಕಳ ಪಾಠದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ ಎಂದು ಹೇಳಿದರು. ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿ ಮೇಲಾಧಿಕಾರಿಗಳಿಗೆ ಸಲ್ಲಿಸುವದಾಗಿ ಹೇಳಿದರು.

> ಶಿಕ್ಷಕರು ಪ್ರತಿನಿತ್ಯ ಒಂದಿಲ್ಲೊಂದು ಸಭೆಗಳಿಗೆ ಹಾಜರಾಗುವುದು, ಮತದಾರರ ಚೀಟಿಗೆ ಆಧಾರ್ ಲಿಂಕ್ ಮಾಡುವುದು, ಮತದಾರರ ಸೇರ್ಪಡೆ, ತೆಗೆದು ಹಾಕುವಿಕೆ, ತಿದ್ದುಪಡಿ ಇತರ ಬಹಳಷ್ಟು ಕೆಲಸಗಳಿರುವುದರಿಂದ ಒತ್ತಡಕ್ಕೆ ಸಿಲುಕುವಂತಾಗಿದೆ. ಬೋಧನೆ ಮತ್ತು ಬಿಎಲ್‌ಓ ಎರಡೂ ಕೆಲಸಗಳನ್ನು ಸಮರ್ಪಕವಾಗಿ ಮಾಡುವದು ಬಹುತೇಕ ಶಿಕ್ಷಕರಿಗೆ ತೊಂದರೆಯಾಗುತ್ತಿದೆ. ಕಾರಣ ಶಿಕ್ಷಕರನ್ನು ಈ ಕೆಲಸದಿಂದ ಬಿಡುಗಡೆಗೊಳಿಸುವಂತೆ ಮನವಿ ಮಾಡಿದರು.

ಈ ವೇಳೆ ಕ.ರಾ.ಪ್ರಾ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪುರ, ಪ್ರ. ಕಾರ್ಯದರ್ಶಿ ಚಂದ್ರಕಾಂತ ನೇಕಾರ, ಬಿ.ಎಂ. ಕುಂಬಾರ, ಬಿ.ಬಿ. ಯತ್ತಿನಹಳ್ಳಿ, ಶ್ರೀಕಾಂತ ನಂದೆಣ್ಣವರ, ಎಮ್.ಎ. ನದಾಫ್, ಗೀತಾ ಹಳ್ಯಾಳ, ಬಿ.ಎಮ್. ಯರಗುಪ್ಪಿ, ಸತೀಶ ಬೊಮಲೆ, ಉಮೇಶ ನೇಕಾರ, ಪಿ.ಸಿ. ಕಾಳಶೆಟ್ಟಿ, ಡಿ.ಎಲ್. ಪಾಟೀಲ, ಎಸ್.ಎನ್. ಕ್ಷತ್ರಿಯ, ಎಸ್.ಎಮ್. ತಾಯಮ್ಮನವರ, ಪಿ.ಪಿ. ಹಿರೇಮಠ, ಎಸ್.ವಿ. ಸೋಗಿ, ಎಲ್.ಆರ್. ಮಲಸಮುದ್ರ, ಎನ್.ಎಸ್. ಬಂಕಾಪೂರ, ಎನ್.ಎಸ್. ಪಾಟೀಲ, ಎಮ್.ಪಿ. ಹರ್ಲಾಪೂರ, ಎಸ್.ಎಸ್. ಪಾಟೀಲ, ವಿ.ಎಸ್. ಹಿರೇಮಠ, ಪಿ.ಎಮ್. ಆಡ್ನೂರ, ರಾಜೇಶ್ವರಿ ಅಡರಕಟ್ಟಿ, ಸಿ.ಎಫ್. ಪಾಟೀಲ, ಶ್ರೀನಿವಾಸ್ ಹಾಗೂ ತಾಲೂಕಿನ ಶಿಕ್ಷಕರು ಹಾಜರಿದ್ದರು.

## ಕೆಂಪೇಗೌಡ ಜಯಂತಿ ಆಚರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಶುಕ್ರವಾರ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿಯನ್ನು ನಾಡಪ್ರಭು ಶ್ರೀ ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವುದರೊಂದಿಗೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ.ಸಂಕದ, ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಭೂ ದಾಖಲೆ ಇಲಾಖೆ ಉಪ ನಿರ್ದೇಶಕ ರುದ್ರಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿದಂತೆ ಇತರರು ಇದ್ದರು.

## ಪ್ರತಿಭಾ ಪುರಸ್ಕಾರ, ಸನ್ಮಾನ ಸಮಾರಂಭ ನಾಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯ ಮಾದಿಗ ನೌಕರರ ಸಂಘ ಹಾಗೂ ಲಕ್ಷ್ಮೇಶ್ವರ/ಶಿರಹಟ್ಟಿ ತಾಲೂಕು ಮಾದಿಗ ಸಮಾಜದಿಂದ ಜೂ.29ರಂದು ಬೆಳಿಗ್ಗೆ 10ಕ್ಕೆ ಪಟ್ಟಣದ ಎಪಿಎಂಸಿಯಲ್ಲಿನ ಎಸ್‌ಬಿಐ ಸಭಾಂಗಣದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ಮತ್ತು ನೂತನ ನೌಕರರಿಗೆ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ. ತಾಲೂಕಾ ಮಾದಿಗರ ಸಂಘದ ಅಧ್ಯಕ್ಷ ಆರ್.ಎಫ್. ದೊಡ್ಡಮನಿ ಅಧ್ಯಕ್ಷತೆ ವಹಿಸುವರು. ಧಾರವಾಡದ ಕೆಯುಡಿ ಕುಲಸಚಿವರಾದ ಪ್ರೊ. ನಿಜಲಿಂಗಪ್ಪ ಮಟ್ಟಿಹಾಳ ಉಪನ್ಯಾಸ ನೀಡುವರು. ಡಿಡಿಪಿಐ ಆರ್.ಎಸ್. ಬುರಡಿ, ತಹಸೀಲ್ದಾರ ಎಂ.ಜಿ. ದಾಸಪ್ಪನವರ, ಬಿಇಓ ವಿ.ವಿ. ನಡುವಿನಮನಿ, ಜಿ.ಎಂ. ಮುಂದಿನಮನಿ, ಎಸ್.ಡಿ. ತಿರಕಪ್ಪನವರ ಉಪಸ್ಥಿತರಿರುವರು ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಎಚ್. ನಡುವಿನಮನಿ ತಿಳಿಸಿದ್ದಾರೆ.

## 3 ದಿನಗಳ ಅಧ್ಯಯನ ಶಿಬಿರಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸಾಹಿತ್ಯ ಅಕಾಡೆಮಿಯು ವಿಶೇಷ ಘಟಕ ಯೋಜನೆಯಡಿ ದಲಿತ ಸಾಹಿತ್ಯ ಅರ್ಧ ಶತಮಾನ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಸೆಪ್ಟೆಂಬರ್ ತಿಂಗಳಲ್ಲಿ ನಡೆಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 50 ವರ್ಷ ವಯಸ್ಸಿನ ಪರಿಶಿಷ್ಟ ಜಾತಿಗೆ ಸೇರಿದ ರಾಜ್ಯದ ಎಲ್ಲ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನ ಜುಲೈ 20 ಆಗಿದ್ದು, ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ https://sahithyaacademy.karnataka.gov.in ದಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ನರೇಗಲ್ ಪಟ್ಟಣ ಪಂಚಾಯತಿಯ 2025-26ನೇ ಸಾಲಿನ 24.10% ಎಸ್ ಎಫ್ ಸಿ ಮುಕ್ತ ನಿಧಿಯಲ್ಲಿ ಪರಿಶಿಷ್ಟ ಜಾತಿಯ (ಬಿಇ ) ಇಂಜನಿಯರ್ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡುವುದು. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಹೊಲಿಗೆ ಯಂತ್ರ ನೀಡುವುದು. ಶೇ 5% ರಲ್ಲಿ ವಿಕಲಚೇತನರಿಗೆ ಕೃತಕ ಶ್ರವಣ ಸಾಧನ ಸಾಮಗ್ರಿಗಳನ್ನು ನೀಡುವ ಕಾರ್ಯಕ್ರಮಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರದ ಸುತ್ತೋಲೆಯಂತೆ ನರೇಗಲ್ ಪಟ್ಟಣದ ಖಾಯಂ ರಹವಾಸಿಯಾಗಿರಬೇಕು. ಅರ್ಜಿಯನ್ನು ಜುಲೈ 17 ರ ಸಂಜೆ 5 ಗಂಟೆಯೊಳಗಾಗಿ ಮುಖ್ಯಾಧಿಕಾರಿಗಳ ಕಚೇರಿ, ಪಟ್ಟಣ ಪಂಚಾಯತ್ ನರೇಗಲ್ ಈ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳನ್ನು ನರೇಗಲ್ ಪಟ್ಟಣ ಪಂಚಾಯತ್ ಕಾರ್ಯಾಲಯ ದೂರವಾಣಿ ಸಂಖ್ಯೆ 08381-268228 ಸಂಪರ್ಕಿಸಬಹುದಾಗಿದೆ.

## ತೋಂಟದ ಶ್ರೀಗಳ ಅಂತಃಕರಣ ಅಮೂಲ್ಯ



■ವಿಜಯಸಾಕ್ಷಿ ಸುದ್ದಿ, ಜೇವರ್ಗಿ

ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯದ ಈ ಸುಂದರ ಪರಿಸರದಲ್ಲಿ ಜಗದ್ಗುರುಗಳಾದ ತೋಂಟದ ಡಾ. ಸಿದ್ದಲಿಂಗ ಮಹಾಸ್ವಾಮಿಜಿಯನ್ನು ಕಾಣಬೇಕು ಎಂದು ಖ್ಯಾತ ಶಿಕ್ಷಣ ತಜ್ಞರು, ಸಮಾಜ ಸೇವಾ ಭೂಷಣ ಪ್ರಶಸ್ತಿ ಪುರಸ್ಕೃತರು ಹಾಗೂ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ್ ಹೇಳಿದರು.

ಅವರು ಜೇವರ್ಗಿ ನಗರದ ಷಣ್ಮುಖ ಶಿವಯೋಗಿ ರೂರಲ್ ಪಾಲಿಟೆಕ್ನಿಕ್ ಮತ್ತು ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯದ ಮೈದಾನದಲ್ಲಿ ಮಾತೃಹೃದಯಿ, ಲಿಂಗೈಕ್ಯ ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮೀಜಿ ನೀರು ಉಣಿಸಿ ಬೆಳೆಸಿರುವ ಸಾವಿರಾರು ಸುಂದರ ಹೂವಿನ ಗಿಡಗಳು, ಸಾಗುವಾನಿ, ಶ್ರೀಗಂಧ, ಬಿಲ್ವಪತ್ರೆ ಮರಗಳನ್ನು ವೀಕ್ಷಿಸಿ ಮಾತನಾಡುತ್ತಿದ್ದರು.

ಪೂಜ್ಯರ ಅಂತಃಕರಣ ಅಮೂಲ್ಯವಾದದ್ದು. ಅವುಗಳನ್ನು ಬಣ್ಣಿಸಲು, ವ್ಯಾಖ್ಯಾನಿಸಲು ಪದಗಳಿಲ್ಲ. ನಾಡಿನ ನೆಲ, ಜಲ, ಪರಿಸರದ ಬಗೆಗಿನ ಶ್ರೀಗಳ ಕಾಳಜಿ ಅಮೋಘ. ಇವುಗಳಿಗಾಗಿ ಶ್ರೀಗಳು ತಮ್ಮ ಬದುಕನ್ನು ಮೀಸಲಿರಿಸಿದ್ದರು. ಪೂಜ್ಯರು ಸಮಾಜದ ಕಣ್ಣಾಗಿದ್ದರು. ಮಾನವೀಯತೆಯ ಅಂತಃಕರಣ ಹೊಂದಿದ್ದರು. ಅವರ ದೂರದೃಷ್ಟಿಯ ಮಹಾನ್ ಕೈಂಕರ್ಯದ ಸಾರ ಅನುಪಮವಾದದ್ದು ಎಂದರು.

ಲಿಂ. ಸಿದ್ದಲಿಂಗ ಶ್ರೀಗಳು ಎಲ್ಲರಿಗೂ ಪ್ರೀತಿ ತೋರಿದ್ದಾರೆ. ಶ್ರೀಮಠದಲ್ಲಿ ಅವಕಾಶ ಕಲ್ಪಿಸಿದ್ದಾರೆ. ಸೌಹಾರ್ದತೆಯ ಕಣಗಳನ್ನು ಬಿತ್ತಿದ್ದಾರೆ. ಪೂಜ್ಯರ ತತ್ವಾದರ್ಶ ಮೌಲ್ಯದಲ್ಲಿ ನಾವೆಲ್ಲರೂ ಸಾಗೋಣ. ಅವರು ಕಂಡ ಕನಸು ನನಸಾಗಿಸೋಣ. ಆ ನಿಟ್ಟಿನಲ್ಲಿ ಕೆಲಸ ಕಾರ್ಯಗಳನ್ನು ಮಾಡೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯದ ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರಿದ್ದರು.

# FSL ವರದಿ ತಿರುಚಲು 5 ಲಕ್ಷ ಲಂಚಕ್ಕೆ ಬೇಡಿಕೆ: ಲೋಕಾ ಬಲೆಗೆ ಬಿದ್ದ 'ವೈದ್ಯ'


■ ವಿಜಯಸಾಕ್ಷಿ ಸುದ್ದಿ, ಹಾವೇರಿ

FSL ವರದಿಯನ್ನೇ ತಿರುಚಲು 5 ಲಕ್ಷ ರೂ. ಲಂಚಕ್ಕೆ ಬೇಡಿಕೆಯಿಟ್ಟಿದ್ದ ವೈದ್ಯನೋರ್ವ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಹಾವೇರಿಯಲ್ಲಿ ಜರುಗಿದೆ.

ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನ್ಯಾಯವೈದ್ಯ ಶಾಸ್ತ್ರ ವಿಭಾಗ ಸಹಾಯಕ ಪ್ರಾಧ್ಯಾಪಕ ಗುರುರಾಜ ಭೀಮರಾಯ ಬಿರಾದಾರ ಲೋಕಾ ಬಲೆಗೆ ಬಿದ್ದ ಆರೋಪಿ.

ಎಪ್ರಿಲ್ 29ರಂದು ನಗರದ ಚಿರಾಯು ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯದಿಂದ ವಂದನಾ ತುಪ್ಪದ ಎಂಬ ಬಾಲಕಿ ಮೃತಪಟ್ಟ ಆರೋಪ ಕೇಳಿ ಬಂದಿತ್ತು. ಘಟನೆ ಸಂಬಂಧ ಆಸ್ಪತ್ರೆ ವಿರುದ್ಧ ದೂರು ದಾಖಲಾಗಿತ್ತು. ಡಾ.ಗುರುರಾಜ ಬಿರಾದಾರ ಅವರು, ಮೃತಬಾಲಕಿಯ ಮರಣೋತ್ತರ ಪರೀಕ್ಷೆ ಮಾಡಿದ್ದರು.

ಬಳಿಕ ಎಫ್ ಎಸ್ ಎಲ್ ವರದಿ ದೂರುದಾರ ಪರವಾಗಿ ಮಾಡಿಕೊಡಲು ಲಂಚಕ್ಕೆ ಬೇಡಿಕೆ



**ಪ್ರಕಟಣೆ.**

**ಕರ್ನಾಟಕ ಲೋಕಾಯುಕ್ತ ಪೊಲೀಸ್ ಠಾಣೆ, ಹಾವೇರಿ.**

**ಚಿರಾಯು ಆಸ್ಪತ್ರೆಯಲ್ಲಿ ಮೃತಪಟ್ಟ ಬಾಲಕಿಯ ಎಫ್.ಎಸ್.ಎಲ್ ವರದಿಯನ್ನು ಪಿರ್ಯಾದುದಾರರ ಪರವಾಗಿ ಮಾಡಿಕೊಡುವುದಾಗಿ ಲಂಚ ಸ್ವೀಕಾರ, ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನ್ಯಾಯ ವೈದ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಹಾಗೂ ಖಾಸಗಿ ವ್ಯಕ್ತಿ ಬಂಧನ.**

ಫಿರ್ಯಾದುದಾರರಾದ ಶ್ರೀ ಮಲ್ಲೇಶಪ್ಪ ಮುಪ್ಪಣ್ಣ ಮಾಸಣಗಿ, ವ್ಯವಸ್ಥಾಪಕರು, ಚಿರಾಯು ಆಸ್ಪತ್ರೆ, ಹಾವೇರಿ ರವರಿಗೆ ಶ್ರೀ ಗುರುರಾಜ ಭೀಮರಾಯ ಬಿರಾದಾರ, ಸಹಾಯಕ ಪ್ರಾಧ್ಯಾಪಕರು, ನ್ಯಾಯ ವೈದ್ಯ ಶಾಸ್ತ್ರ ವಿಭಾಗ, ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಹಾವೇರಿ ಹಾಗೂ ಖಾಸಗಿ ವ್ಯಕ್ತಿ ಶ್ರೀ ಚನ್ನಬಸಯ್ಯ ಶಂಕ್ರಯ್ಯ ಕುಲಕರ್ಣಿ, ಇಜಾರಿಲಕಮಾಪುರ ಹಾವೇರಿ. ರವರು ದಿನಾಂಕ 29-04-2025 ರಂದು ಫಿರ್ಯಾದುದಾರರ ಆಸ್ಪತ್ರೆಯಲ್ಲಿ ಮೃತ ಬಾಲಕಿ ವಂದನಾ ತುಪ್ಪದ ರವರ ಎಫ್.ಎಸ್.ಎಲ್ ವರದಿಯನ್ನು ಫಿರ್ಯಾದುದಾರರ ಪರವಾಗಿ ಮಾಡಿಸಿಕೊಡುವುದಾಗಿ ತಿಳಿಸಿ ರೂ 5,00,000/- ಗಳಿಗೆ ಬೇಡಿಕೆ ಇಟ್ಟು, ನಂತರ ರೂ 3,00,000/- ಗಳಿಗೆ ಒಪ್ಪಿಕೊಂಡು ಇಂದು ದಿನಾಂಕ 27-06-2025 ರಂದು ಫಿರ್ಯಾದುದಾರರಿಂದ ರೂ 3,00,000/- ಗಳ ಲಂಚದ ಹಣವನ್ನು ಹಾವೇರಿ ನಗರದ ಚಿರಾಯು ಆಸ್ಪತ್ರೆಯಲ್ಲಿ ಪಡೆದುಕೊಳ್ಳುವಾಗ ಯಶಸ್ವಿಯಾಗಿ ಟ್ರ್ಯಾಪ್ ಮಾಡಿದ್ದು ಇರುತ್ತದೆ. ಸದರಿ ಪ್ರಕರಣದ ತನಿಖೆಯನ್ನು ಶ್ರೀ ಎಮ್ ಎಸ್ ಕೌಲಾಪುರೆ, ಎಸ್.ಪಿ. ಕಲೋಎ, ದಾವಣಗೆರೆ ರವರ ಮಾರ್ಗದರ್ಶನದಲ್ಲಿ ಕೈಗೊಂಡು, ಶ್ರೀ ಸಿ ಮಧುಸೂದನ, ಡಿವೈಎಸ್‌ಪಿ ಕರ್ನಾಟಕ ಲೋಕಾಯುಕ್ತ ರವರ ನೇತೃತ್ವದಲ್ಲಿ, ತನಿಖಾಧಿಕಾರಿಗಳಾದ ಶ್ರೀ ದಾದಾವಲ ಕೆ ಎಚ್, ಪೊಲೀಸ್ ನಿರೀಕ್ಷಕರು ಶ್ರೀ ಮಂಜುನಾಥ ಪಂಡಿತ್ ಪಿಎಸ್, ಪೊಲೀಸ್ ನಿರೀಕ್ಷಕರು, ಶ್ರೀ ಬಸವರಾಜ ಹಳಬಣ್ಣನವರ ಹಾಗೂ ಸಿಬ್ಬಂದಿ ರವರು ಕಾರ್ಯಾಚರಣೆಯಲ್ಲಿ ಭಾಗಿಯಾಗಿರುತ್ತಾರೆ. ಸದರಿ ಆರೋಪಿತರನ್ನು ದಸ್ತಗಿರಿ ಮಾಡಿದ್ದು, ತನಿಖೆ ಮುಂದುವರೆದಿದೆ.

ಇಟ್ಟಿದ್ದರು.

ಶುಕ್ರವಾರ ಮುಂಗಡವಾಗಿ 3 ಲಕ್ಷ ರೂಪಾಯಿ ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಅಧಿಕಾರಿಗಳ ದಾಳಿ ಮಾಡಿದ್ದಾರೆ. ಲೋಕಾಯುಕ್ತ ಎಸ್ಪಿ ಎಂ.ಎಸ್. ಕೌಲಾಪುರೆ, ಡಿವೈಎಸ್ಪಿ ಮಧುಸೂದನ ನೇತೃತ್ವದಲ್ಲಿ ದಾಳಿ ನಡೆದಿದ್ದು, ಗುರುರಾಜ ಬಿರಾದಾರ ಜೊತೆ ಮತ್ತೋರ್ವ ಖಾಸಗಿ ವ್ಯಕ್ತಿ ಚನ್ನಬಸಯ್ಯ ಕುಲಕರ್ಣಿ ವಶಕ್ಕೆ ಪಡೆದಿರುವ ಲೋಕಾ ಅಧಿಕಾರಿಗಳು ತನಿಖೆ ಕೈಗೊಂಡಿದ್ದಾರೆ.

# ವಂದೇ ಭಾರತ್ ರೈಲಲ್ಲಿ ಬೆಂಕಿ: ಜಸ್ಟ್ ಮಿಸ್ ಕೂದಲೆಳೆ ಅಂತರದಲ್ಲಿ ತಪ್ಪಿದ ಅನಾಹುತ!




■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ವಂದೇ ಭಾರತ್ ರೈಲಿನ ಚಕ್ರದಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಸಿಬ್ಬಂದಿ ಸಮಯ ಪ್ರಜ್ಞೆಯಿಂದ ಭಾರೀ ಅನಾಹುತವೊಂದು ತಪ್ಪಿರುವ ಘಟನೆ ದಾವಣಗೆರೆಯಲ್ಲಿ ಜರುಗಿದೆ.

ವಂದೇ ಭಾರತ್ ರೈಲು ಧಾರವಾಡದಿಂದ ಬೆಂಗಳೂರಿಗೆ ಬರುತ್ತಿತ್ತು. ರೈಲು ದಾವಣಗೆರೆ ಸಮೀಪ ಬಂದಾಗ, ಚಕ್ರದಲ್ಲಿ ಬೆಂಕಿ ಕಾಣಿಸಿಕೊಂಡಿದೆ.

ಕೂಡಲೇ ಎಚ್ಚೆತ್ತ ಸಿಬ್ಬಂದಿ ರೈಲನ್ನು ದಾವಣಗೆರೆಯಲ್ಲಿ ನಿಲ್ಲಿಸಿದ್ದಾರೆ. ರೈಲ್ವೆ ಪೊಲೀಸರು ಹಾಗೂ ಸಿಬ್ಬಂದಿ ಬೆಂಕಿಯನ್ನು ನಂದಿಸಿದ್ದಾರೆ.

ಸಿಬ್ಬಂದಿ ಸಮಯಪ್ರಜ್ಞೆಯಿಂದ ಭಾರೀ ಅನಾಹುತ ತಪ್ಪಿದಂತಾಗಿದೆ. ವಂದೇ ಭಾರತ್ ರೈಲಿನಲ್ಲಿದ್ದ ಪ್ರಯಾಣಿಕರು, ಶತಾಬ್ದಿ ಎಕ್ಸ್‌ಪ್ರೆಸ್‌ನಲ್ಲಿ ಬೆಂಗಳೂರಿಗೆ ತೆರಳಿದ್ದಾರೆ ಎನ್ನಲಾಗಿದೆ.

# ಬೀದಿ ಶ್ವಾನಗಳಿಗೆ ವಿಷ: ನರಳಿ-ನರಳಿ ಪ್ರಾಣಬಿಟ್ಟ ನಾಯಿಗಳು!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮೊನ್ನೆ ಚಾಮರಾಜನಗರ ಅರಣ್ಯ ಪ್ರದೇಶದಲ್ಲಿ ಕಿಡಿಗೇಡಿಗಳು ಹುಲಿಗಳಿಗೆ ವಿಷವುಣಿಸಿದ್ದರಿಂದ ಐದು ಹುಲಿಗಳು ಸಾವನ್ನಪ್ಪಿದ್ದವು.. ಈ ಘಟನೆ ಮಾಸುವ ಮುನ್ನವೇ ಐದಾರು ಬೀದಿ ಶ್ವಾನಗಳಿಗೆ ವಿಷವುಣಿಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಬೆಂಗಳೂರಿನ ಭಟ್ಟರಹಳ್ಳಿಯಲ್ಲಿ ಬೀದಿ ನಾಯಿಗಳಿಗೆ ತಿಂಡಿಯಲ್ಲಿ ಕಿಡಿಗೇಡಿಗಳು ವಿಷ ಹಾಕಿದ್ದು, ಐದು ನಾಯಿಗಳು ನರಳಾಡಿ ಸ್ಥಳದಲ್ಲೇ ಸಾವನ್ನಪ್ಪಿವೆ.. ಎರಡು ಮೂರು ದಿನಗಳ ಹಿಂದೆಯೇ ಈ ಘಟನೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ನಾಯಿಗಳು ರಕ್ತವಾಂತಿಯಿಂದ ನರಳಾಡುತ್ತಿರುವ ದೃಶ್ಯವು ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಸ್ಥಳದಲ್ಲಿ ಐದು ನಾಯಿಗಳು ಮೃತಪಟ್ಟಿದ್ದು, ಒಂದನ್ನು ಮಾತ್ರ ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿ ರಕ್ಷಿಸಿದ್ದಾರೆ. ಈ ಘಟನೆಯು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಇನ್ನೂ ಈ ಸಂಬಂಧ ಕೆಆರ್ ಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಮಾದಕ ವಸ್ತುಗಳ ಸೇವನೆಯಿಂದ ದೂರವಿರಿ

# ನಿಮ್ಮ ಅಮೂಲ್ಯ ಜೀವನ ಕಾಪಾಡಿ

ಮಾದಕ ವಸ್ತುಗಳ ಸೇವನೆಯಿಂದ ಮನುಷ್ಯ ಅನೇಕ ದೈಹಿಕ ಹಾಗೂ ಮಾನಸಿಕ ಕಾಯಿಲೆಗೆ ಒಳಗಾಗಿ ತನ್ನ ಜೀವವನ್ನೆ ಕಳೆದುಕೊಳ್ಳುತ್ತಾನೆ. ಆರ್ಥಿಕವಾಗಿ ದಿವಾಳಿ ಕೂಡ ಆಗುತ್ತಾನೆ. ಇದರಿಂದ ಕುಟುಂಬ ಹಾಗೂ ಸಮಾಜದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ. ಸಮಾಜ ಮಾದಕ ವಸ್ತುಗಳಿಂದ ಮುಕ್ತವಾಗಿರಬೇಕು. ಆದ್ದರಿಂದ ಪ್ರತಿ ವರ್ಷ ಜೂನ್ 26ರಂದು ವಿಶ್ವ ಮಾದಕ ವಸ್ತು ವಿರೋಧಿ ದಿನವನ್ನು ಆಚರಿಸಲಾಗಿದೆ.

ಮಾದಕ ವ್ಯಸನ ಎಂಬ ಪದ ಬಂದಾಗ ನಮ್ಮ ಮನಸ್ಸಿಗೆ ಬರುವ ಮೊದಲ ವಿಷಯವೆಂದರೆ ಮದ್ಯ ಮತ್ತು ತಂಬಾಕು ವ್ಯಸನ. ಇವು ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಾಮಾನ್ಯ ಮಾದಕ ವ್ಯಸನದ ಸಮಸ್ಯೆಗಳಾಗಿವೆ. ಮಾದಕ ವ್ಯಸನ ಎಂದರೆ ತನಗೆ ಅಥವಾ ಇತರರಿಗೆ ಹಾನಿಕಾರಕವಾಗುವ ರೀತಿಯಲ್ಲಿ ಮಾದಕ ವಸ್ತುಗಳನ್ನು ಬಳಸುವ ಚಟ. ಇದು ಒಂದು ಮಾನಸಿಕ ಅಸ್ವಸ್ಥತೆಯಾಗಿದೆ. ಮಾದಕ ವ್ಯಸನವು ವ್ಯಕ್ತಿಯಲ್ಲಿ ಸಾಮಾಜಿಕ ವಿರೋಧಿ ನಡವಳಿಕೆಗಳನ್ನು ಉಂಟುಮಾಡಬಹುದು.

ಮಾದಕ ವಸ್ತುಗಳ ದುರುಪಯೋಗ ಮಾಡುವ ವ್ಯಕ್ತಿಯು ವ್ಯಸನದ ಅಡಿಯಲ್ಲಿ ಬರುವುದಿಲ್ಲ ಅಥವಾ ಮಾದಕ ವಸ್ತುಗಳ ಬಳಕೆಯ ಅಸ್ವಸ್ಥತೆಯನ್ನು ಹೊಂದಿರುವುದಿಲ್ಲ. ಮಾದಕ ವಸ್ತುಗಳ ದುರುಪಯೋಗ ಮಾಡುವ ವ್ಯಕ್ತಿಯು




ಹೆಚ್ಚಾಗಿ ತಮ್ಮ ಮನಸ್ಸಿನ ಮೇಲೆ ನಿಯಂತ್ರಣ ಹೊಂದಿರುತ್ತಾನೆ. ಆದರೆ ವ್ಯಸನ ಹೊಂದಿರುವ ವ್ಯಕ್ತಿಯು ಅಸಹಾಯಕನಾಗುತ್ತಾನೆ ಮತ್ತು ತನ್ನ ಮೇಲೆ ನಿಯಂತ್ರಣ ಕಳೆದುಕೊಳ್ಳುತ್ತಾನೆ.

ಕೆಲವರು ತಮ್ಮ ಗೆಳೆಯರು ಅದನ್ನು ತಮಗೆ ಪರಿಚಯಿಸಿದರು ಎಂದು ಹೇಳುತ್ತಾರೆ. ಕೆಲವರಿಗೆ ಕುತೂಹಲವು ಅವರನ್ನು ಮತ್ತಷ್ಟು ಅನ್ವೇಷಿಸಲು ಪ್ರೇರೇಪಿಸಿತು ಎಂದು ಹೇಳುತ್ತಾರೆ. ಅವರು ಎದುರಿಸುವ ಒತ್ತಡ ಅಥವಾ ಸಮಸ್ಯೆಗಳನ್ನು ನಿಭಾಯಿಸಲು ಕೆಲವು ಮಾದಕ ವಸ್ತುಗಳ ದುರುಪಯೋಗ, ಕೆಲವು ಜನರು ಮಾದಕ ವಸ್ತುಗಳ ವ್ಯಸನಿಯಾಗಿರುವ ನಿಕಟ ವ್ಯಕ್ತಿಗಳನ್ನು ಹೊಂದಿರುತ್ತಾರೆ. ಪರಿಣಾಮವಾಗಿ, ಅವರು ಅದಕ್ಕೆ ಪ್ರವೃತ್ತಿಯನ್ನು ಹೊಂದುತ್ತಾರೆ.

ಉತ್ತೇಜಕಗಳು ನಮ್ಮ ದೇಹದ ನೈಸರ್ಗಿಕ ಕಾರ್ಯಗಳನ್ನು ಹೆಚ್ಚಿಸುವ ಔಷಧಿಗಳ ವಿಧಗಳಾಗಿವೆ. ಅವು ಕಾನೂನುಬಾಹಿರವಾಗಿವೆ. ನಿದ್ರಾಹೀನತೆ ಅಥವಾ ತೀವ್ರ ಖಿನ್ನತೆಯಿಂದ ಬಳಲುತ್ತಿರುವ ಜನರಿಗೆ ವೈದ್ಯರು ಶಿಫಾರಸು ಮಾಡುತ್ತಾರೆ. ಅವು ಜಾಗರೂಕತೆ ಮತ್ತು ಸಂಭ್ರಮದ ಭಾವನೆಯನ್ನು ಉಂಟುಮಾಡುತ್ತವೆ. ಅವು ಅಭ್ಯಾಸವನ್ನು ರೂಪಿಸುವ ಪ್ರವೃತ್ತಿಯನ್ನು ಹೊಂದಿರುತ್ತವೆ ಮತ್ತು ಒಬ್ಬ ವ್ಯಕ್ತಿಯು ನಿಗದಿತ ಪ್ರಮಾಣವನ್ನು ಅನುಸರಿಸದೆ ಅದನ್ನು ಸೇವಿಸಿದರೆ, ಅದು ಮಾದಕತೆ ಅಥವಾ ಅವಲಂಬನೆಗೆ ಕಾರಣವಾಗಬಹುದು. ಅಂತಹ ಔಷಧಿಗಳಿಗೆ ವ್ಯಸನಿಯಾಗುವ ಜನರು ಹೆಚ್ಚಿನ ಔಷಧಿಗಳನ್ನು ಖರೀದಿಸಲು ಕುಟುಂಬ ಸದಸ್ಯರು ಅಥವಾ ಸ್ನೇಹಿತರಿಂದ ಹಣವನ್ನು ಕದ್ದ ಪ್ರಕರಣಗಳಿವೆ.

ಇದು ಭ್ರಮೆಗಳು, ಆತ್ಮಹತ್ಯಾ ಆಲೋಚನೆಗಳು, ಉನ್ಮಾದ ಮತ್ತು ಮನೋರೋಗಕ್ಕೆ ಕಾರಣವಾಗಬಹುದು. ವ್ಯಕ್ತಿಯು ತಮ್ಮ ವೃತ್ತಿ, ಕುಟುಂಬ, ಸ್ನೇಹಿತರು ಮತ್ತು ಉತ್ತಮ ಆರೋಗ್ಯವನ್ನು ಕಳೆದುಕೊಳ್ಳಬಹುದು. ಉತ್ತೇಜಕಗಳ ದುರುಪಯೋಗವು ಉತ್ತೇಜಕ ಪ್ರೇರಿತ ಮನಸ್ಥಿತಿ ಅಸ್ವಸ್ಥತೆಗಳು ಅಥವಾ ಆತಂಕದ ಅಸ್ವಸ್ಥತೆ ಅಥವಾ ಉತ್ತೇಜಕ ಮಾದಕತೆಗೆ ಕಾರಣವಾಗಬಹುದು.

ನೀವು ನಿಮಗಾಗಿ ಅಥವಾ ನಿಮ್ಮ ಪ್ರೀತಿಪಾತ್ರರಿಗೆ ಚಿಕಿತ್ಸೆ ಪಡೆಯುತ್ತಿದ್ದರೆ, ಕೆಲವು ವಿಷಯಗಳನ್ನು ಗಮನಿಸಬೇಕು. ಮಾದಕ ವ್ಯಸನ/ಅವಲಂಬನೆ/ ವ್ಯಸನಕ್ಕೆ ಹಲವಾರು ರೀತಿಯ ಚಿಕಿತ್ಸಾ ಕಾರ್ಯಕ್ರಮಗಳು ಲಭ್ಯವಿದೆ. ಇದು ಎಲ್ಲರಿಗೂ ಸರಿಹೊಂದುವ ವಿಧಾನವಲ್ಲ. ಅಂತಹ ಸಂದರ್ಭಗಳಲ್ಲಿ ಉದ್ದೇಶವು ಬಹಳ ಮುಖ್ಯ ಎಂಬುದನ್ನು ನೆನಪಿಟ್ಟುಕೊಳ್ಳಿ. ಮಾಡಬೇಕಾದ ಪ್ರಮುಖ ವಿಷಯವೆಂದರೆ, ಮಾದಕ ವ್ಯಸನದ ಬಗ್ಗೆ ನಿಮ್ಮನ್ನು ಪರಾಮರ್ಶೆಗೆ ಒಡ್ಡಿಕೊಳ್ಳಬೇಕು. ಮನೋವೈದ್ಯರು, ಮಾನಸಿಕ ಆರೋಗ್ಯ, ವೃತ್ತಿಪರರು-ಸಲಹೆಗಾರರು, ಮನಶ್ಶಾಸ್ತ್ರಜ್ಞರು ಸೇರಿದಂತೆ ವೈದ್ಯಕೀಯ ವೃತ್ತಿಪರರ ತಂಡವು ಫಾರ್ಮಾಕೋಥೆರಪಿಯಲ್ಲಿ ಸಹಾಯ ಮಾಡುತ್ತದೆ. ಜೊತೆಗೆ ಒತ್ತಡವನ್ನು ನಿಭಾಯಿಸಲು ಆರೋಗ್ಯಕರ ನಿಭಾಯಿಸುವ ಕಾರ್ಯವಿಧಾನಗಳನ್ನು ಕಲಿಯುವುದು, ವೈಯಕ್ತಿಕ ಅಭಿವೃದ್ಧಿ, ಪ್ರೇರಣೆ ಮತ್ತು ಮತ್ತಷ್ಟು ಕಡುಬಯಕೆ ಮತ್ತು ಹಿಂತೆಗೆದುಕೊಳ್ಳುವ ಲಕ್ಷಣಗಳ ನಿರ್ವಹಣೆಯ ಮೇಲೆ ಕೆಲಸ ಮಾಡುತ್ತದೆ.

ವೈಯಕ್ತಿಕ ಅವಧಿಗಳ ಹೊರತಾಗಿ, ಗುಂಪು ಚಿಕಿತ್ಸೆಯು ತುಂಬಾ ಪರಿಣಾಮಕಾರಿ ಮತ್ತು ಸಹಾಯಕವಾಗಿದೆ ಎಂದು ಕಂಡುಬಂದಿದೆ. ಅನಾಮಧೇಯ ಗುಂಪು ಚಿಕಿತ್ಸೆಯೂ ಲಭ್ಯವಿದೆ. ಗುಂಪು ಚಿಕಿತ್ಸೆಯು ಬೆಂಬಲವನ್ನು ನೀಡುವಲ್ಲಿ ಸಹಾಯ ಮಾಡುತ್ತದೆ, ಮಾದಕ ವ್ಯಸನದಿಂದ ಚೇತರಿಸಿಕೊಳ್ಳುವಲ್ಲಿ ಸಮಚಿತ್ತತೆಯನ್ನು ಪ್ರೋತ್ಸಾಹಿಸುತ್ತದೆ. ಈ ಸಭೆಗಳು ಸಮುದಾಯವನ್ನು ಒಟ್ಟುಗೂಡಿಸುವ ಭಾವನೆಯನ್ನು ಬೆಳೆಸಲು ಮತ್ತು ಇತರರು ಮತ್ತು ಸ್ವಯಂ ಬಗ್ಗೆ ತಿಳುವಳಿಕೆ ಮತ್ತು ಸಹಾನುಭೂತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.

**- ರಾಘವೇಂದ್ರ ಶಾಂತಗೀರಿ.**
ಪ್ರಶಿಕ್ಷಣಾರ್ಥಿ, ವಾರ್ತಾ ಮತ್ತು ಸಾ.ಸಂ. ಇಲಾಖೆ. ಗದಗ.

# ಎಸ್‌ಡಿಪಿಐ ಜಿಲ್ಲಾ ಸಮಿತಿಯ ವಿಶೇಷ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಡಿಪಿಐ ಪಕ್ಷದ ಜಿಲ್ಲಾ ಸಮಿತಿಯ ವಿಶೇಷ ಸಭೆಯು ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಆಫ್ಸರ್ ಕೊಡ್ಲಿಪೇಟೆ ಹಾಗೂ ರಾಜ್ಯ ಕಾರ್ಯದರ್ಶಿ ಆಫ್ಸರ್ ಕೆ.ಆರ್. ನಗರ ಅವರ ಸಮ್ಮುಖದಲ್ಲಿ, ಬಿಲಾಲ್ ಗೋಕಾವಿ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಪಕ್ಷದ ಸಂಘಟನೆ ಬಲವರ್ಧನೆ, ಮುಂದಿನ ಚಟುವಟಿಕೆಗಳ ರೂಪುರೇಷೆ, ಸ್ಥಳೀಯ ರಾಜಕೀಯ ಪರಿಸ್ಥಿತಿಗಳ ಕುರಿತು ಚರ್ಚಿಸಲಾಯಿತು. ಸಂಘಟನೆಯ ಉದ್ದೇಶ ಮತ್ತು ಜವಾಬ್ದಾರಿಗಳನ್ನು ಮನದಟ್ಟಾಗಿ ಅನುಸರಿಸುವ ಕುರಿತು ಆಫ್ಸರ್ ಕೊಡ್ಲಿಪೇಟೆ ಮಾತನಾಡಿದರು.

ಈ ಸಂದರ್ಭದಲ್ಲಿ ಪಕ್ಷದ ಮುಖಂಡರಾದ ಅನ್ವರ್ ಬಾಗೇವಾಡಿ, ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಜಿಲ್ಲಾ ಸಮಿತಿ ಸದ್ಯಸ ಜಿಲಾನಿ ಮುಲ್ಲಾ, ಕಾರ್ಯದರ್ಶಿ ಸಮೀರ್ ಕೊಟ್ಟೂರ್, ಫಯಾಜ್, ಮುಸ್ತಾಕ್ ಕಟ್ಟಿಮನಿ, ಮುಸ್ತಾಕ್ ಹೊಸಮನಿ, ಜಿಲಾನಿ ಲಕ್ಕುಂಡಿ, ಉಪಸ್ಥಿತರಿದ್ದರು.

ಪಕ್ಷದ ಜಿಲ್ಲಾ ಪ್ರದಾನ ಕಾರ್ಯದರ್ಶಿ ಅಫ್ಘಾನ್ ತರಾಫ್ದರ್ ಸ್ವಾಗತಿಸಿದರು.




# ಕಾನೂನು ವಿದ್ಯಾರ್ಥಿನಿಯ ಮೇಲೆ ಸಾಮೂಹಿಕ ಅತ್ಯಾಚಾರ; ಟಿಎಂಸಿ ನಾಯಕ ಸೇರಿದಂತೆ ಮೂವರ ಬಂಧನ

■ ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಈ ವಾರದ ಆರಂಭದಲ್ಲಿ ಕೋಲ್ಕತ್ತಾದ ಕಾನೂನು ಕಾಲೇಜಿನಲ್ಲಿ ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿದೆ ಎಂದು ಆರೋಪಿಸಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಪುರುಷರನ್ನು ಬಂಧಿಸಲಾಗಿದ್ದು, ಭಾರಿ ಆಕ್ರೋಶಕ್ಕೆ ಕಾರಣವಾಗಿದೆ.

ಕಳೆದ ವರ್ಷ ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಇದೇ ರೀತಿಯ ಅಪರಾಧ ನಡೆದಿತ್ತು. ಟ್ರೈನಿ ವೈದ್ಯೆಯ ಮೇಲಿನ ಅತ್ಯಾಚಾರ-ಕೊಲೆ ಪ್ರಕರಣದ ವಿರುದ್ಧ ರಾಷ್ಟ್ರವ್ಯಾಪಿ ಪ್ರತಿಭಟನೆಗಳು ನಡೆದಿದ್ದವು. ಆಡಳಿತ ಪಕ್ಷವಾದ ತೃಣಮೂಲ ಕಾಂಗ್ರೆಸ್‌ನ ಪ್ರಸ್ತುತ ವಿದ್ಯಾರ್ಥಿ ವಿಭಾಗದ ನಾಯಕರಾಗಿರುವ ಮೂವರು ಆರೋಪಿಗಳನ್ನು ಗುರುವಾರ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು.

# ಅಣ್ಣಿಗೇರಿಯಲ್ಲಿ ಜೀವನ ಕೌಶಲ್ಯ ಕಾರ್ಯಾಗಾರ




■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಯುವ ಸ್ಪಂದನ ಕೇಂದ್ರ ಧಾರವಾಡ ಹಾಗೂ ಎನ್.ಎಸ್.ಎಸ್ ಸಹಯೋಗದಲ್ಲಿ ಜೀವನ ಕೌಶಲ್ಯ ಎಂಬ ವಿಷಯದ ಮೇಲೆ ಒಂದು ದಿನದ ಕಾರ್ಯಾಗಾರವನ್ನು ಶ್ರೀ ಅಮೃತೇಶ್ವರ ಸಂಯುಕ್ತ ಪದವಿಪೂರ್ವ ಕಾಲೇಜು ಅಣ್ಣಿಗೇರಿಯಲ್ಲಿ ಏರ್ಪಡಿಸಲಾಗಿತ್ತು.

ಮುಖ್ಯ ಅತಿಥಿಗಳಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಎಂ.ಟಿ. ಮಂಜುನಾಥಸ್ವಾಮಿ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಬೆಂಗಳೂರು ನಿಮ್ಹಾನ್ಸ್ ಆಸ್ಪತ್ರೆಯ ಯುವ ಸ್ಪಂದನ ಯೋಜನೆಯ ನೋಡಲ್ ಅಧಿಕಾರಿ ವರುಣಕುಮಾರ ಡಿ ಕಾಲೇಜಿನ ವಿದ್ಯಾರ್ಥಿಗಳಿಗೆ ಜೀವನ ಕೌಶಲ್ಯಗಳನ್ನು ಚಟುವಟಿಕೆಗಳ ಮೂಲಕ ವಿವರಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಎಮ್.ಆರ್. ಮುಂಡರಗಿ, ಎನ್.ಎಸ್.ಎಸ್ ಅಧಿಕಾರಿ ಅಶೋಕ ಬಿ.ಬಿ, ಧಾರವಾಡ ಜಿಲ್ಲಾ ಯುವ ಸಮಲೋಚಕರಾದ ಸುರೇಖಾ ನಾವಲಗಿ ಮತ್ತು ನವಲಗುಂದ ಯುವ ಪರಿವರ್ತಕ ಗಂಗಾಧರ ರೋಣದ ಉಪಸ್ಥಿತರಿದ್ದರು.

# ಕಪ್ಪತ್ತಗಿರಿ ದೈವೀ ವನದಲ್ಲಿ ಪರಿಸರೋತ್ಸವ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಪ್ಪತ್ತಗಿರಿ ಫೌಂಡೇಶನ್ ಶಿಕ್ಷಣ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾ ವೇದಿಕೆಯ ವತಿಯಿಂದ ಪರಿಸರೋತ್ಸವ ಕಾರ್ಯಕ್ರಮ ಜೂನ್ 29ರಂದು ನಡೆಯಲಿದೆ. ರಾಜ್ಯ ಮಟ್ಟದ ಕವಿಗೋಷ್ಠಿ, ಸಾಧಕರಿಗೆ ಸನ್ಮಾನ, ಗದಗ ಜಿಲ್ಲೆಯ ಪದಾಧಿಕಾರಿಗಳಿಗೆ ಪದಗ್ರಹಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕಪ್ಪತ್ತಗಿರಿ ಫೌಂಡೇಷನ್ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಲಾ ಎಂ. ಇಟಗಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಕಳಸಾಪೂರ ಗ್ರಾಮದ ಗಣ್ಯರಾದ ಶರದ್‌ರಾವ್ ಚ.ಹುಯಿಲಗೋಳ ನೆರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಚಂದ್ರಕಲಾ ಎಂ.ಇಟಗಿಮಠ ವಹಿಸಿಕೊಳ್ಳಲಿದ್ದಾರೆ. ಕವಿಗೋಷ್ಠಿಯ ಅಧ್ಯಕ್ಷತೆಯನ್ನು ಸಾಹಿತಿ ಡಾ. ನಿಂಗೂ ಸೊಲಗಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಾಹಿತಿಗಳಾದ ಹರಿನಾಥ್ ಬಾಬು, ಈಶ್ವರ ಕುರಿ ಪಾಲ್ಗೊಳ್ಳುವರು. ಪ್ರಾಸ್ತಾವಿಕವಾಗಿ ಮಹಾಂತೇಶ ಬೇರಗಣ್ಣವರ ಮಾತನಾಡುವರು. ಉಪನ್ಯಾಸಕರಾಗಿ ಎಂ.ಆರ್. ನಲವಡಿ ಆಗಮಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಐ.ಕೆ. ಕಮ್ಮಾರ, ಶೋಭಾ ಮೇಟಿ, ಬಿ.ಬಿ. ಗೌಡರ, ರಾಮಪ್ಪ ಪೂಜಾರ, ರವಿಕಾಂತ ಅಂಗಡಿ, ಮಲ್ಲಿಕಾರ್ಜುನ ಖಂಡಮ್ಮನವರ, ಬಸವರಾಜ ಕುರ್ತಕೋಟಿ, ಚಿದಾನಂದ ಗೆಜ್ಜೆಸ್ವಾಮಿಮಠ, ಗೀತಾ ಮಹಾಂತೇಶ ಸಜ್ಜನರ, ಸಂಗಮೇಶ ಬಸಪ್ಪ ನೀರಲಗಿ, ಗೋಪಾಲ ಲಮಾಣಿ ಆಗಮಿಸಲಿದ್ದಾರೆ.

ಎಂ.ಕೆ. ಲಮಾಣಿ, ಎ.ಮಹಮ್ಮದ್ ರಫಿ, ಡಾ. ಪ್ರವೀಣ ಕರಿಯಪ್ಪನವರ, ಮಹಾಂತೇಶ ಶಂಕ್ರಪ್ಪ ಗುಜಮಾಗಡಿ, ಕೀರ್ತಿ ಶೇಖಪ್ಪ ನಾಯ್ಕರ್, ಸ್ವಪ್ನಾ ಪ.ಹಿರೇಮಠ ಗೌರವ ಸನ್ಮಾನವನ್ನು ಸ್ವೀಕರಿಸಲಿದ್ದಾರೆ. ಕವಿಗೋಷ್ಠಿಯಲ್ಲಿ ರಾಜ್ಯದ 35 ಲೇಖಕ-ಲೇಖಕಿಯರು ತಮ್ಮ ಸ್ವರಚಿತ ಕವನವನ್ನು ವಾಚಿಸಲಿದ್ದಾರೆ. ಜ್ಯೋತಿ ಗೆಜ್ಜೆಸ್ವಾಮಿಮಠ ಪ್ರಾರ್ಥಿಸುವರು. ಶಿವಲೀಲಾ ಎಸ್.ಧನ್ನಾ ಸ್ವಾಗತಿಸಿದರೆ, ಮಂಜುನಾಥ್ ಹೂಗಾರ ಹಾಗೂ ಮಂಜುಳಾ ರಾಯನಗೌಡ್ರ ಕಾರ್ಯಕ್ರಮ ನಿರೂಪಿಸುವರು. ಮಮತಾ ದೊಡ್ಡಮನಿ ವಂದನಾರ್ಪಣೆ ಮಾಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಳೇ ಬಸ್ ನಿಲ್ದಾಣದಲ್ಲಿ ಇಂದಿರಾ ಕ್ಯಾಂಟೀನ್ ಪ್ರಾರಂಭಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ದಿ ನೆಟ್ವರ್ಕ್ ಅಸೋಸಿಯೇಟೆಡ್ ಫಾರ್ ಸ್ಟ್ರೀಟ್ ವೆಂಡರ್ಸ್ ಆಫ್ ಕರ್ನಾಟಕ, ಮ್ಯಾಕ್ಸಿಕ್ಯಾಬ್ ಚಾಲಕರ-ಮಾಲಕರ ಸಂಘ ಹಾಗೂ ವೆಲ್‌ಕಮ್ ಹೊಟೇಲ್ ಅಟೋಸ್ಟ್ಯಾಂಡ್ ಸಂಘದ ವತಿಯಿಂದ ಗದಗ ಶಹರದ ಶ್ರೀ ಗಾನಯೋಗಿ ಪುಟ್ಟರಾಜ ಗವಾಯಿಗಳ ಬಸ್ ನಿಲ್ದಾಣದಲ್ಲಿ ಇಂದಿರಾ ಕ್ಯಾಂಟೀನ್ ಸ್ಥಾಪಿಸುವಂತೆ ಜಿಲ್ಲಾಧಿಕಾರಿಗಳು ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ವಿದ್ಯಾರ್ಥಿಗಳಿಗೆ, ಬಡವರಿಗೆ, ಕೂಲಿ ಕಾರ್ಮಿಕರಿಗೆ, ಅಟೋ ಚಾಲಕರಿಗೆ, ಹಳ್ಳಿಯಿಂದ ಶಹರಕ್ಕೆ ಬಂದು ವ್ಯಾಪಾರ ಮಾಡುವವರಿಗೆ, ರೋಗಿಗಳಿಗೆ ಗದಗ ಶಹರ ಶ್ರೀ ಗಾನಯೋಗಿ ಪುಟ್ಟರಾಜ ಗವಾಯಿಗಳ (ಹಳೇ) ಬಸ್ ನಿಲ್ದಾಣವು ಪ್ರಮುಖ ಸ್ಥಳವಾಗಿದ್ದು, ನಿಗದಿತ ಸಮಯಕ್ಕೆ ಅತಿ ಕಡಿಮೆ ಹಣದಲ್ಲಿ ಹಸಿವನ್ನು ನೀಗಿಸುವ, ಆಹಾರ ದೊರಕುವ ಕೇಂದ್ರವಾಗಿರುವ ಇಂದಿರಾ ಕ್ಯಾಂಟೀನ್ ಸ್ಥಾಪನೆಯಾಗಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಉಮರ ಫಾರೂಕ ಹುಬ್ಬಳ್ಳಿ, ವಕೀಲರು, ಕಾನೂನು ಸಲಹೆಗಾರರಾದ ಎಂ.ಬಿ. ನದಾಫ್, ಮ್ಯಾಕ್ಸಿಕ್ಯಾಬ್ ಮಾಲಕ-ಚಾಲಕರ ಸಂಘದ ಖಜಾಂಚಿ ಸಮೀರ ಜಮಾದಾರ, ವೆಲ್‌ಕಮ್ ಹೊಟೇಲ್ ಅಟೋ ಸ್ಟ್ಯಾಂಡ್ ಅಧ್ಯಕ್ಷ ಅಬುಬಕರ ಅಣ್ಣಿಗೇರಿ, ಗದಗ ಜಿಲ್ಲಾ ಹೂವಿನ ವ್ಯಾಪಾರಸ್ಥರ ಸಂಘದ ಉಪಾಧ್ಯಕ್ಷ ಜಾಫರ, ಸಲೀಮ ಬಳ್ಳಾರಿ, ಮಹಮ್ಮದಅಲಿ ಅತ್ತಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಬಿಹಾರ ಮತದಾರರ ಪಟ್ಟಿ ಪರಿಷ್ಕರಣೆ 'NRC'ಗಿಂತ ಅಪಾಯಕಾರಿ: ಮಮತಾ ಬ್ಯಾನರ್ಜಿ

■ ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಬಿಹಾರದಲ್ಲಿ ಮತದಾರರ ಪಟ್ಟಿಯನ್ನು ಪರಿಷ್ಕರಿಸುವ ಚುನಾವಣಾ ಆಯೋಗದ ಘೋಷಣೆಯು ರಾಷ್ಟ್ರೀಯ ನಾಗರಿಕರ ನೋಂದಣಿ(ಎನ್‌ಆರ್‌ಸಿ)ಗಿಂತ "ಇನ್ನೂ ಅಪಾಯಕಾರಿ" ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಗುರುವಾರ ಆರೋಪಿಸಿದ್ದಾರೆ. ಬಿಹಾರ ಮತದಾರರ ಪಟ್ಟಿ

ಬಿಹಾರ ವಿಧಾನಸಭಾ ಚುನಾವಣೆಗೆ ತಿಂಗಳುಗಳ ಮೊದಲು ಚುನಾವಣಾ ಆಯೋಗ ಪ್ರಕಟಿಸಿರುವ ಮತದಾರರ ಪಟ್ಟಿಯ "ವಿಶೇಷ ತೀವ್ರ ಪರಿಷ್ಕರಣೆ"ಯನ್ನು ಉಲ್ಲೇಖಿಸಿ ಅವರು ಈ ಹೇಳಿಕೆ ನೀಡಿದ್ದಾರೆ. ಈ ಪ್ರಕ್ರಿಯೆಯ ಭಾಗವಾಗಿ, 2003 ರ ಮತದಾರರ ಪಟ್ಟಿಯಲ್ಲಿ ಹೆಸರಿಲ್ಲದ ವ್ಯಕ್ತಿಗಳು ಅರ್ಹತೆಯ ಪುರಾವೆಯನ್ನು ಸಲ್ಲಿಸಬೇಕಾಗುತ್ತದೆ.

ಜುಲೈ 1, 1987 ರ ಮೊದಲು ಜನಿಸಿದ ಮತದಾರರು ತಮ್ಮ ಜನ್ಮ ದಿನಾಂಕ ಮತ್ತು ಜನ್ಮ ಸ್ಥಳದ ಪುರಾವೆಯನ್ನು ತೋರಿಸಬೇಕು, ಆದರೆ ಜುಲೈ 1, 1987 ಮತ್ತು ಡಿಸೆಂಬರ್ 2, 2004 ರ ನಡುವೆ



ಜನಿಸಿದವರು ತಮ್ಮ ಪೋಷಕರ ಜನ್ಮ ದಿನಾಂಕ ಮತ್ತು ಜನ್ಮ ಸ್ಥಳದ ಬಗ್ಗೆಗಿನ ದಾಖಲೆಗಳನ್ನು ಸಲ್ಲಿಸಬೇಕು ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ. ಡಿಸೆಂಬರ್ 2, 2004 ರ ನಂತರ ಜನಿಸಿದವರಿಗೆ ಇಬ್ಬರೂ ಪೋಷಕರ ಜನ್ಮ ದಿನಾಂಕದ ಪುರಾವೆ ಅಗತ್ಯವಿರುತ್ತದೆ ಎಂದು ವರದಿ ಉಲ್ಲೇಖಿಸಿದೆ.

ಬಿಹಾರದಿಂದ ಈ ಪ್ರಕ್ರಿಯೆ ಪ್ರಾರಂಭವಾದರೂ, ನಿಜವಾದ ಗುರಿ ಪಶ್ಚಿಮ ಬಂಗಾಳ, ವಿಶೇಷವಾಗಿ ಅದರ ವಲಸೆ ಕಾರ್ಮಿಕರು ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ. "ಚುನಾವಣಾ ಆಯೋಗವು [ಬಿಜೆಪಿಯ] ಮುಖವಾಣಿಯಾಗಿರದೆ, ಸ್ವತಂತ್ರ ಸಂಸ್ಥೆಯಂತೆ ಕಾರ್ಯನಿರ್ವಹಿಸಬೇಕು" ಎಂದು ಅವರು ಹೇಳಿದ್ದಾರೆ.

# ಬೆಂಗಳೂರಿನ ವಾತಾವರಣ ದೇಶದಲ್ಲಿ ಎಲ್ಲೂ ಸಿಗಲ್ಲ: ರಾಮಲಿಂಗಾರೆಡ್ಡಿ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ವಾತಾವರಣ ದೇಶದ ಬೇರೆ ಎಲ್ಲೂ ಸಿಗಲ್ಲ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿಕೆ ಕೊಟ್ಟಿದ್ದಾರೆ. ಚಿಕ್ಕಪೇಟೆಯ ಮಾವಳ್ಳಿಯಲ್ಲಿರುವ ಕೆಂಪೇಗೌಡ ಪ್ರತಿಮೆಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಕೆಂಪೇಗೌಡ ಅವರ ಕಾಲದಲ್ಲಿ ಬೆಂಗಳೂರು ದಾಟಬಾರದು ಅಂತ ನಾಲ್ಕು ಗೋಪುರ ಕಟ್ಟಿದ್ದರು.

ಆದರೆ ಇಂದು ಬೆಂಗಳೂರು ಬೃಹತ್ ಆಕಾರದಲ್ಲಿ ಬೆಳೆದಿದೆ. ಕೆಂಪೇಗೌಡ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಗಿದೆ. ಬೆಂಗಳೂರಿನ ಮೊದಲನೇ ಕೆಂಪೇಗೌಡ ಪ್ರತಿಮೆ ಬಿಬಿಎಂಪಿಯಲ್ಲಿ ಇತ್ತು. ಇದು ಬೆಂಗಳೂರಿಗೆ ಎರಡನೇ ಪ್ರತಿಮೆ. ಬೆಂಗಳೂರಿನ ಎರಡನೇ ಅಶ್ವಾರೂಢ ಕೆಂಪೇಗೌಡ ಪ್ರತಿಮೆ ನಾನು ಜಯನಗರ ಶಾಸಕರಿದ್ದಾಗ ಮಾಡಿದ್ದು. ಆವತ್ತು ಕೆಂಪೇಗೌಡ ದಿನಾಚರಣೆ ಆಚರಣೆ ಮಾಡುತ್ತಿರಲಿಲ್ಲ. ಆವಾಗ ನಾವು ಅಶ್ವಾರೂಢ ಪ್ರತಿಮೆ ನಿರ್ಮಾಣ ಮಾಡಿದ್ವಿ.

ಸಿಎಂ ಆಗಿದ್ದಾಗ ಧರ್ಮಸಿಂಗ್ ಉದ್ಘಾಟನೆ ಮಾಡಿದ್ದರು. ಆಡಳಿತಕ್ಕೆ ಕೆಂಪೇಗೌಡರು ಹೆಚ್ಚು ಒತ್ತು ನೀಡಿದ್ದರು. ಪ್ರತಿಮೆ ಆಗಲು ಉದಯ್ ಶಂಕರ್ ಸೇರಿದಂತೆ ಗ್ರಾಮಸ್ಥರು ಬಹಳಷ್ಟು ಶ್ರಮಿಸಿದ್ದಾರೆ. ಈಗ ಬೇಕಾದಷ್ಟು ಪ್ರತಿಮೆ ಇದೆ ಆದರೆ ಆವತ್ತು ಎರಡನೇ ಪ್ರತಿಭಟನೆ ನಿರ್ಮಾಣ ಮಾಡಿದ್ವಿ. ಕೆಂಪೇಗೌಡರು ದೂರ ದೃಷ್ಟಿ ಇರುವವರು. ಇಂತವರನ್ನ ಸ್ಮರಣೆ ಮಾಡುವುದು ಬಹಳ ಒಳ್ಳೆಯ ಕೆಲಸ.


ವಳ ಕಾಲದಲ್ಲಿ ಇಷ್ಟೊಂದು ಬೆಂಗಳೂರು ಬೆಳೆದಿರಲಿಲ್ಲ. ಈಗ ಬೃಹತ್ ಆಗಿ ಬೆಂಗಳೂರು ಬೆಳೆದಿದೆ. ಬೆಂಗಳೂರಿನಲ್ಲಿ ಸಮಸ್ಯೆಗಳು ಜಾಸ್ತಿ ಇದೆ.

# ಬೊಮ್ಮಾಯಿಗೆ ಬಿಗ್ ರಿಲೀಫ್: ವಕ್ಫ್ ವಿಚಾರದಲ್ಲಿ ಪ್ರಚೋದನಾಕಾರಿ ಹೇಳಿಕೆ ವಿರುದ್ಧದ ಕೇಸ್ ರದ್ದು!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿಗೆ ಬಿಗ್ ರಿಲೀಫ್ ಸಿಕ್ಕಿದೆ. ವಕ್ಫ್ ವಿಚಾರದಲ್ಲಿ ಪ್ರಚೋದನಾಕಾರಿ ಹೇಳಿಕೆ ನೀಡಿದ್ದ ಆರೋಪದಲ್ಲಿ ದಾಖಲಾಗಿದ್ದ ಕೇಸ್ ರದ್ದು ಮಾಡಿ ಹೈಕೋರ್ಟ್ ಆದೇಶ ಹೊರಡಿಸಿದೆ.

ಬೊಮ್ಮಾಯಿ ವಿರುದ್ಧದ ಎರಡು ಪ್ರಕರಣಗಳನ್ನು ರದ್ದುಪಡಿಸಿ ಹೈಕೋರ್ಟ್ ಏಕಸದಸ್ಯ ಪೀಠ ಆದೇಶ ಹೊರಡಿಸಿದೆ. ಬೊಮ್ಮಾಯಿ ಹೇಳಿಕೆಯಲ್ಲಿ ಪ್ರಚೋದನಕಾರಿ ಅಂಶಗಳಿಲ್ಲವೆಂದು ಹಿರಿಯ ವಕೀಲ ಪ್ರಭುಲಿಂಗ್ ನಾವದಗಿ ವಾದ ಮಂಡಿಸಿದ್ದರು. ಇದೀಗ ಪ್ರಕರಣ ರದ್ದುಪಡಿಸಿ ನ್ಯಾ. ಎಸ್.ಆರ್.ಕೃಷ್ಣಕುಮಾರ್ ಅವರಿದ್ದ ಪೀಠ ಆದೇಶಿಸಿದೆ.



ಪ್ರಕರಣಕ್ಕೆ ಸಂಬಂಧಿಸಿದಂತೆ ಹಾವೇರಿ ಜಿಲ್ಲೆಯ ಸವಣೂರು ಹಾಗೂ ಶಿಗ್ಗಾಂವಿ ಪೊಲೀಸ್ ಠಾಣೆಗಳಲ್ಲಿ 2024ರಲ್ಲಿ ಪ್ರಕರಣಗಳು ದಾಖಲಾಗಿದ್ದವು.

ಬಳಿಕ ಕೇಸ್ ರದ್ದು ಕೋರಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ಪ್ರಕರಣಗಳನ್ನು ರದ್ದುಗೊಳಿಸಿದ್ದು, ಆ ಮೂಲಕ ಬಸವರಾಜ ಬೊಮ್ಮಾಯಿಗೆ ರಿಲೀಫ್ ಸಿಕ್ಕಂತಾಗಿದೆ.

ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಯೋಗದಿಂದ ಮನಸ್ಸು, ದೇಹದ ಸಮತೋಲನ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಯೋಗ ಶಾಸ್ತ್ರವು ಜಗತ್ತಿಗೆ ವ್ಯಾಪಿಸಿದ್ದಲ್ಲದೆ, ಜಗತ್ತನ್ನು ಒಂದುಗೂಡಿಸುವ ಕೆಲಸವನ್ನು ಮಾಡುತ್ತಿದೆ. 2000 ವರ್ಷಗಳ ಹಿಂದೆ ಪತಂಜಲಿ ಯೋಗ ಸೂತ್ರವನ್ನು ಕೊಟ್ಟರು. ಮಾನವನ ಮನಸ್ಸು ದೇಹ ಮತ್ತು ಆತ್ಮದ ಸಮತೋಲನವನ್ನು ಯೋಗ ಮಾಡುತ್ತದೆ. ಭಾರತೀಯ ದರ್ಶನದಲ್ಲಿ ಯೋಗ ತುಂಬಾ ಮಹತ್ವದ್ದು ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಲಿಂಗಾಯತ ಪ್ರಗತಿಶೀಲ ಸಂಘದ ವತಿಯಿಂದ ನಡೆದ 2751ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಅಂಗ-ಲಿಂಗ ಸಂಯೋಗವೇ ಯೋಗ. ಅಂಗವೇ ಆತ್ಮ. ಲಿಂಗವೇ ಪರಮಾತ್ಮ. ದೈಹಿಕವಾಗಿ, ಮಾನಸಿಕವಾಗಿ



ಆರೋಗ್ಯವನ್ನು ನೀಡುವುದು ಯೋಗ. ಸಾಮರಸ್ಯದ ಕೆಲಸವನ್ನು ಯೋಗ ಮಾಡುತ್ತದೆ. ಯೋಗದ ಬೇರು ನಮ್ಮ ಭಾರತ. ಅತ್ಯಂತ ಹಳೆಯ ವಿಜ್ಞಾನದಲ್ಲಿ ಯೋಗವೂ ಒಂದಾಗಿದೆ. ದೈಹಿಕ, ಮಾನಸಿಕ ಯೋಗಕ್ಷೇಮದೊಂದಿಗೆ ಆಧ್ಯಾತ್ಮಿಕ ವಿಕಸನ ಸಂರಕ್ಷಣೆಯಲ್ಲಿಯೂ ಯೋಗ ಉಪಯುಕ್ತವಾಗಿದೆ ಎಂದು ಆಶೀರ್ವಚನ ನೀಡಿದರು.

ಡಾ. ಚಂದ್ರಮೌಳಿ ನಾಯ್ಕರ ಅವರ 'ಗೋರಕ್ಷ ಸಂಹಿತೆ ಹಾಗೂ ಯೋಗ ಬೀಜ' ಪುಸ್ತಕ ಬಿಡುಗಡೆ ಮಾಡಲಾಯಿತು. ನೀಟ್ ಪರೀಕ್ಷೆಯಲ್ಲಿ ೦ಬಿಬಿದಲ್ಲಿ ಉತ್ತಮ ರ್‍ಯಾಂಕ್ ಪಡೆದ ಸೃಜನ್ ವೀರಬಸಪ್ಪ ಮುರಗಿ ಇವರನ್ನು ಸನ್ಮಾನಿಸಲಾಯಿತು.

ಯೋಗಾಚಾರ್ಯ ಕೆ.ಎಸ್. ಪಲ್ಲೇದ ನೇತೃತ್ವದಲ್ಲಿ ಎಸ್.ವಾಯ್.ಬಿ.ಎಂ.ಎಸ್ ಯೋಗ ಪಾಠಶಾಲಾ ಪ್ರಶಿಕ್ಷಣಾರ್ಥಿಗಳಿಂದ ಆಕರ್ಷಕವಾದ ಯೋಗಾಸನ ಪ್ರದರ್ಶನ ನಡೆಯಿತು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ವಚನ ಸಂಗೀತ ಸೇವೆಯನ್ನು ನಡೆಸಿಕೊಟ್ಟರು. ಧಾರ್ಮಿಕ ಗ್ರಂಥ ಪಠಣವನ್ನು ವರ್ಷಾ ಆರ್.ಮಳಜಿ ಹಾಗೂ ವಚನ ಚಿಂತನವನ್ನು ಸಾನ್ವಿ ಆರ್.ಪಾಟೀಲ ನಡೆಸಿಕೊಟ್ಟರು.

ಉಪನ್ಯಾಸಕರಾಗಿ ಆಗಮಿಸಿದ ಧಾರವಾಡದ ಕ.ವಿ.ವಿಯ ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ಡಾ. ಚಂದ್ರಮೌಳಿ ನಾಯ್ಕರ ಮಾನತಾಡಿ, ಆರೋಗ್ಯ ಭಾಗ್ಯಕ್ಕೆ ಯೋಗ ಒಂದು ಸಾಧನ. ಅನೇಕ ಮಹಾತ್ಮರು ಯೋಗ, ತ್ಯಾಗ, ಮತ್ತು ಸಾಧನೆ ಮಾಡಿದ್ದರಿಂದ ಅವರಿಗೆ ಗೌರವ ಕೊಡುತ್ತೇವೆ. ಮನೆಯಲ್ಲಿದ್ದುಕೊಂಡು ಯೋಗ ಮಾರ್ಗದಲ್ಲಿ ಇರುವುದು, ಒಳ್ಳೆಯದಾಗಲಿ ಎನ್ನುವುದೇ ಅಹಿಂಸಾ ಸಂಕಲ್ಪ. ಯೋಗ ಸಾಧನೆ ಮಾಡಿ ಹೆಸರುಳಿಯುವಂತೆ ಬದುಕಬೇಕು, ಕೆಲಸ ಮಾಡಬೇಕು. ಪ್ರತಿಯೊಬ್ಬರೂ ಯೋಗ ಸಾಧನೆಯನ್ನು ಮಾಡಬೇಕು ಎಂದು ತಿಳಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದವರು, ವಿದ್ಯಾ ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ, ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು. ದಾಸೋಹ ಸೇವೆಯನ್ನು ಶರಣ ವೀರಬಸಪ್ಪ ಬಸಪ್ಪ ಮುರಗಿ ಹಾಗೂ ಕುಟುಂಬ ವರ್ಗದವರು ವಹಿಸಿದ್ದರು.

# ವಿದ್ಯಾರ್ಥಿಗಳು ಪುಸ್ತಕದ ದಾಸರಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಮಾದಕ ವಸ್ತುಗಳ ದಾಸರಾಗದೆ ಪುಸ್ತಕದ ದಾಸರಾಗಬೇಕು. ವಾತಾವರಣದಲ್ಲಿರುವ ದುಶ್ಚಟ ದಾಸರಿಂದ ಇಂದಿನ ಯುವಕರು ತಮ್ಮ ಜೀವನದಲ್ಲಿಯೂ ಕೂಡ ದುಶ್ಚಟಗಳನ್ನು ಅಳವಡಿಸಿಕೊಳ್ಳಲು ಮುಂದಾಗುತ್ತಿರುವುದು ವಿಪರ್ಯಾಸ. ಇಂತಹ ಪರಿಸ್ಥಿತಿಯಿಂದ ಹೊರ ಬಂದು ಓದುವ ಹವ್ಯಾಸವನ್ನೂ ರೂಢಿಸಿಕೊಳ್ಳುವುದು ಬಹುಮುಖ್ಯವಾಗಿದೆ. ವಿದ್ಯಾರ್ಥಿಗಳು ಭವಿಷ್ಯ ರೂಪಿಸಿಕೊಳ್ಳಲು ಮಾದಕ



ವಸ್ತುಗಳಿಂದ ದೂರವಿದಷ್ಟು ಸಾಧನೆಗೆ ಅನುಕೂಲವಾಗುತ್ತದೆ ಎಂದು ಆಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕ ಇಸ್ಮಾಯಿಲ್ ಆರಿ ಹೇಳಿದರು.

ಶಹರದ ರೈಲ್ವೆ ಪೊಲೀಸ್ ಠಾಣೆಯಲ್ಲಿ ಆಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯ ಸಹಯೋಗದಲ್ಲಿ ನಡೆದ ಅಂತಾರಾಷ್ಟ್ರೀಯ ಮಾದಕ ವಸ್ತುಗಳ ವಿರೋಧಿ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಯಾವುದೇ ಮಾನಸಿಕ ಒತ್ತಡಕ್ಕೆ ಒಳಗಾಗದೆ ಏಗ್ರಾತೆಯಿಂದ ಒಳ್ಳೆಯ ಶಿಕ್ಷಣ ಪಡೆದುಕೊಂಡು ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡುವ ಗುರಿಯನ್ನು ಹೊಂದಬೇಕು. ವಿದ್ಯಾರ್ಥಿ ಜೀವನದಲ್ಲಿ ಅನೇಕ ತೊಂದರೆ, ಅಡಚಣೆಗಳ ಬರುವುದು ಸಹಜ. ಆದರೆ, ಅವುಗಳತ್ತ ಚಿತ್ತಹರಿಸದೇ ಓದುವ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು ಎಂದರು.

ರೈಲ್ವೆ ಪಿಎಸ್‌ಐ ಬಿ.ಎನ್. ರಾಮಗೌಡ್ರ ಮಾತನಾಡಿ, ಮಾದಕ ವಸ್ತುಗಳ ಬಗ್ಗೆ, ರೈಲ್ವೆ ಹಳಿ ದಾಟುವ ಕುರಿತು ಜಾಗೃತಿ ಮೂಡಿಸಿದರು. ಎಎಸ್‌ಐ ಆರ್.ಎನ್. ಧೂಳಿ, ಎಎಸ್‌ಐ ರೇಣಕಪ್ಪ, ರೈಲ್ವೆ ಪೊಲೀಸ್ ಸಿಬ್ಬಂದಿಗಳಾದ ಸಂಜು, ರೇಷ್ಮಾ ಹಾದಿಮನಿ, ಆಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯ ದೈಹಿಕ ಶಿಕ್ಷಕ ಎಂ.ಜಿ. ಪಟೇಲ ಸೇರಿದಂತೆ ರೈಲ್ವೆ ಪೊಲೀಸ್ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಅಕ್ಕನ ಬಳಗದ ಸಂಸ್ಕೃತಿ ಸಮುದಾಯ ಭವನಕ್ಕೆ 11 ಲಕ್ಷ ರೂಗಳ ದೇಣಿಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಅಕ್ಕನ ಬಳಗ ನಿರ್ಮಿಸುತ್ತಿರುವ ಸಂಸ್ಕೃತಿ ಸಮುದಾಯ ಭವನಕ್ಕೆ ಅಕ್ಕನ ಬಳಗದ ಟ್ರಸ್ಟಿ ಶಾಂತಾ ಅಂದಾನಪ್ಪ ಗೌಡರ 11 ಲಕ್ಷ ರೂ.ಗಳ ದೇಣಿಗೆಯ ಚೆಕ್‌ನ್ನು ಅಕ್ಕನ ಬಳಗದ ಮಾಸಿಕ ಕಾರ್ಯಕ್ರಮದಲ್ಲಿ ಸಮರ್ಪಿಸಿದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಕಪ್ಪತ್ತಗಿರಿಯ ನಂದಿವೇರಿ ಸಂಸ್ಥಾನಮಠದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು ಮಾತನಾಡಿ, ಶಾಂತಕ್ಕ ಅವರು ಬಹು ದೊಡ್ಡ ಮೊತ್ತದ ದೇಣಿಗೆಯನ್ನು ನೀಡುವ ಮೂಲಕ ಸಾರ್ಥಕತೆಯನ್ನು ಮೆರೆದಿದ್ದಾರೆ ಎಂದು ಬಣ್ಣಿಸಿದರು.

ಅಧ್ಯಕ್ಷತೆ ವಹಿಸಿದ್ದ ಅಕ್ಕನ ಬಳಗದ ಅಧ್ಯಕ್ಷೆ ಚೆಕ್‌ನ್ನು ಸ್ವೀಕರಿಸಿ ಅಕ್ಕನ ಬಳಗದ ಹಿರಿಯ ಟ್ರಸ್ಟಿಗಳಾಗಿರುವ ಶಾಂತಕ್ಕ ಅಂದಾನಪ್ಪ ಗೌಡರ ಅವರ ದಾನಗುಣವನ್ನು ಕೊಂಡಾಡಿ, ಇಂದಿನ ಬೆಲೆ ಏರಿಕೆಯ ದಿನಗಳಲ್ಲಿ ಹಾಗೂ ಇಳಿ ವಯಸ್ಸಿನಲ್ಲಿ ದೊಡ್ಡ ಮೊತ್ತದ ಹಣವನ್ನು ಸ್ವಯಂ ಪ್ರೇರಣೆಯಿಂದ ನೀಡಿರುವದು ಅಭಿನಂದನೀಯ. ದೇಣಿಗೆ ಸಾರ್ಥಕತೆಯನ್ನು ಪಡೆದುಕೊಂಡಿದೆ ಎಂದು ಬಣ್ಣಿಸಿದರು.

ಶಾಂತಾ ಅಂದಾನಪ್ಪ ಗೌಡರ ಅವರನ್ನು ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆಯ ಮೇಲೆ ಅಕ್ಕನ ಬಳಗದ ಕಾರ್ಯದರ್ಶಿ ಜಯಶ್ರೀ ಪಾಟೀಲ, ಖಜಾಂಚಿ ಶಿವಲೀಲಾ ಹಿರೇಮಠ, ಮೃತ್ಯುಂಜಯ ಸಂಕೇಶ್ವರ ಉಪಸ್ಥಿತರಿದ್ದರು.

ಡಾ. ಅನಂತ ಶಿವಪೂರ, ಡಾ. ವಾಣಿ ಶಿವಪೂರ, ಡಾ. ಮಹಾಂತೇಶ ಬಾತಾಖಾನಿ, ಅಕ್ಕನ ಬಳಗದ ಅಧ್ಯಕ್ಷೆ ಕಸ್ತೂರಿ ಹಿರೇಗೌಡ್ರ ಸೇರಿದಂತೆ ಎಲ್ಲ ಟ್ರಸ್ಟಿಗಳು ಹಾಗೂ ಸದಸ್ಯರು, ಗಣ್ಯರಿದ್ದರು.

# ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಎಲ್ಲ ವಸತಿ ನಿಲಯಲಗಳಲ್ಲಿ ಹಾಗೂ ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದ ವತಿಯಿಂದ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಹನಮಂತಪ್ಪ ಎಚ್.ಅಬ್ಬಿಗೇರಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಅನೇಕ ವಸತಿ ನಿಲಯಗಳು ಹಾಗೂ ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯದ ಕೊರತೆ ಇದ್ದು, ಸದರ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳು, ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ಇಲಾಖೆಗಳ ವಸತಿ ನಿಲಯಗಳಲ್ಲಿ ಸರಿಯಾಗಿ ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ.

ಶೌಚಾಲಯದ ವ್ಯವಸ್ಥೆ, ಆಹಾರದ ವ್ಯವಸ್ಥೆ ಸರಿ ಇಲ್ಲ. ಇದರಿಂದ ಅಲ್ಲಿ ಕಲಿಯುವ ವಿದ್ಯಾರ್ಥಿಗಳಿಗೆ ತೊಂದರೆ-ಯಾಗುತ್ತಿದೆ. ವಸತಿ ಶಾಲೆಗಳಿಗೆ ಈ ಕೂಡಲೇ ಮೂಲಭೂತ ಸೌಕರ್ಯದ ವ್ಯವಸ್ಥೆಯನ್ನು ಮಾಡಬೇಕೆಂದು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ವಿನಾಯಕ ಬದಿ, ಭರಮಣ್ಣ ಕಿಲ್ಲಾರಿ, ಮುತ್ತಣ್ಣ ಚವಡಣ್ಣವರ, ತೌಸಿಫ ಢಾಲಾಯತ, ಕುಮಾರ ರೇವಣ್ಣವರ, ದಾವಲಸಾಬ ತಹಸೀಲ್ದಾರ, ರೆಹಮಾನ ದರ್ಗದ, ಇರ್ಫಾನ ತಾಳಿಕೋಟಿ, ಸುಲೇಮಾನ ಮಂಜಲಾಪೂರ, ಸಲ್ಮಾನ ಚಿಕ್ಕೊಪ್ಪ, ಕಾಂತೇಶ, ಹುಚ್ಚಪ್ಪ ಗಡಾದ, ಮೆಹಬೂಬಸಾಬ ಗದಗ, ಹನಮಂತಪ್ಪ ಪೂಜಾರ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

# ಶ್ರೀಗಂಧದ ಮರಗಳನ್ನು ಹೊತ್ತೊಯ್ದ ಕಳ್ಳರು: ಸರ್ಕಾರಿ ಕಚೇರಿ ಆವರಣದಲ್ಲೇ ಕೃತ್ಯ!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಶ್ರೀಗಂಧದ ಮರಗಳನ್ನು ಖದೀಮರು ಹೊತ್ತೊಯ್ದಿರುವ ಘಟನೆ ನಗರದ ಸರ್ವೆ ಕಚೇರಿ ಆವರಣದಲ್ಲಿ ಜರುಗಿದೆ.

ಕಚೇರಿ ಆವರಣದಲ್ಲಿದ್ದ ಮೂರು ಶ್ರೀಗಂಧ ಮರಗಳನ್ನು ಕಳ್ಳರು ಕತ್ತರಿಸಿಕೊಂಡು ಹೋಗಿದ್ದಾರೆ. ರಾತ್ರಿ ವೇಳೆ ಕಳ್ಳರು ಈ ಕೆಲಸ ಮಾಡಿದ್ದಾರೆ. ಅರಣ್ಯ ಇಲಾಖೆ ಕಚೇರಿ ಕೂಗಳತೆಯಲ್ಲಿಯೇ ಸಿಟಿ ಸರ್ವೆ ಕಚೇರಿ ಇದೆ. ಯಾವುದೇ ಭಯವಿಲ್ಲದೇ ಆರೋಪಿಗಳು ಕೃತ್ಯ ಎಸಗಿದ್ದಾರೆ. ಸುಮಾರು ಹತ್ತು ವರ್ಷದ ಮೂರು ಮರಗಳನ್ನು ಕತ್ತರಿಸಿಕೊಂಡು ಹೋಗಿರುವ ಕಳ್ಳರು, ಮರದ ಮಧ್ಯದಲ್ಲಿ ಇರುವ ಶ್ರೀಗಂಧ ಮಾತ್ರ ತೆಗೆದುಕೊಂಡು ಪರಾರಿಯಾಗಿದ್ದಾರೆ. ಸದ್ಯ ಉಪನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



# ಶಂಕರಗೌಡ ಪಾಟೀಲರ ಕಾರ್ಯ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಗದಗ

ತಂತ್ರಜ್ಞಾನದ ಆವಿಷ್ಕಾರದಲ್ಲಿ ಸಿಲುಕಿರುವ ಸಂದರ್ಭದಲ್ಲಿಯೂ ಇತಿಹಾಸದ ಗರ್ಭದಲ್ಲಿ ಸೇರಿರುವ ಹಳೆ ತಲೆಮಾರಿನ ರಂಗಭೂಮಿಯ ಕಲಾವಿದರ ಪಾತ್ರಗಳ ಛಾಯಾಚಿತ್ರ, ಹಳೆಯ ಪತ್ರಿಕಾ ಲೇಖನಗಳ ಪ್ರದರ್ಶನದ ಮೂಲಕ ಜನಸಮೂಹಕ್ಕೆ ಪರಿಚಯಿಸುತ್ತಿರುವ ಕಾರ್ಯ ಅತೀ ಮಹತ್ವದ್ದಾಗಿದೆ. ಚಿತ್ರಕಲಾವಿದ, ವಿಶಿಷ್ಟ ಹವ್ಯಾಸದ ಶಂಕರಗೌಡ ಪಾಟೀಲ ಈ ಕಾರ್ಯ ಮುಂದುವರೆಸಲೆಂದು ಗದುಗಿನ ಉಭಯ ಶ್ರೀಗಳ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ 79ನೇ ಪ್ರದರ್ಶನವನ್ನು ಉದ್ಘಾಟಿಸಿದ ಪರಮಪೂಜ್ಯ ಶ್ರೀ ಕಲ್ಲಯ್ಯಜ್ಜನವರು ಆಶೀರ್ವದಿಸಿದರು.



ರಂಗಕಲಾವಿದ ಬಿ. ಬಾಬು ಮಾತನಾಡುತ್ತಾ, ಶಂಕರಗೌಡ ಪಾಟೀಲ ರಾಜ್ಯದ ರಾಜಧಾನಿಯಿಂದ ಹಿಡಿದು ರಾಜ್ಯದ ತುಂಬೆಲ್ಲಾ ಸುತ್ತಾಡಿ 79 ಪ್ರದರ್ಶನ ನೀಡಿ ಜನಮೆಚ್ಚುಗೆ ಪಾತ್ರರಾಗಿದ್ದಾರೆ. ಅವರ ಕಾರ್ಯಕ್ಕೆ ಕಲಾವಿದರು, ಜನಸಮುದಾಯ ಸ್ಪಂದಿಸಬೇಕು, ಸರ್ಕಾರ ಗಮನಹರಿಸಿ ಪ್ರೋತ್ಸಾಹಿಸಬೇಕೆಂದು ಹೇಳಿದರು.

ಕೆ.ಎಚ್. ದೊಡ್ಡಮನಿ ಮಾತನಾಡಿ, ಇಂದಿನ ಡಿಜಿಟಲ್ ಕಾಲದಲ್ಲಿಯೂ ಶಂಕರಗೌಡ ಪಾಟೀಲರ ಕಾರ್ಯ ಶ್ಲಾಘನೀಯವಾಗಿದೆ ಎಂದರು. ಬೀಳಗಿಯ ಸನಾದಿ ಅಪ್ಪಣ್ಣ ವಂಶಸ್ಥರಾದ ನಾಲ್ಕನೇ ತಲೆಮಾರಿನ ಶಹನಾಯಿ ವಾದಕ ಬಸವರಾಜ ಭಜಂತ್ರಿ, ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡ ಸಂಗೀತ ಕಲಾವಿದರು, ರಂಗಭೂಮಿ ಕಲಾವಿದರು, ಪಂ. ಪಂಚಾಕ್ಷರ ಗವಾಯಿಗಳವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಪ್ರದರ್ಶನ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ವ್ಯಸನಮುಕ್ತಿ ಕೇಂದ್ರದಲ್ಲಿ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ

# ಸಮಾಜಮುಖಿ ಕೆಲಸಗಳಲ್ಲಿ ತೊಡಗಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪರಿವರ್ತನಾ ಸೇವಾ ಸಂಸ್ಥೆಯ ಸಂಸ್ಕಾರ ವ್ಯಸನಮುಕ್ತಿ ಕೇಂದ್ರ ಹಾಗೂ ಪುನರ್ವಸತಿ ಕೇಂದ್ರದಲ್ಲಿ ಅಂತಾರಾಷ್ಟ್ರೀಯ ಮಾದಕ ವಸ್ತುಗಳ ವಿರೋಧಿ ದಿನವನ್ನು ಆಚರಿಸಲಾಯಿತು.

ಗದಗ ನಗರ ಠಾಣೆಯ ಪಿ.ಎಸ್.ಐ ವಿಜಯ ಪವಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪರಿವರ್ತನಾ ಸಂಸ್ಥೆಯವರು ಪುನರ್ವಸತಿ ಕೇಂದ್ರದಿಂದ ವ್ಯಸನಿಗಳನ್ನು ಚಿಕಿತ್ಸೆ ಮೂಲಕ ಗುಣಪಡಿಸಿ ನಿಮ್ಮ ಆರೋಗ್ಯಕರವಾದ ವ್ಯಕ್ತಿತ್ವ ನಿರ್ಮಾಣ ಮಾಡುತ್ತಿರುವುದು ಸಮಾಜಮುಖಿ ಕಾರ್ಯವಾಗಿದೆ. ವ್ಯಸನಮುಕ್ತಿ ಕೇಂದ್ರದಿಂದ ಗುಣಮುಖರಾಗಿ ಹೊರಗೆ ಹೋದ ಮೇಲೆ ಗೌರವಯುತವಾಗಿ ಬಾಳುವಂತಾಗಲಿ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಕೆ.ಎಸ್.ಎಸ್ ಕಾನೂನು ಮಹಾವಿದ್ಯಾಲಯದ ಆಡಳಿತ ಅಧಿಕಾರಿ ನಾಗರಾಜ್ ಕುಲಕರ್ಣಿ ಮಾತನಾಡಿ, ಸಮಾಜದಲ್ಲಿ ಆರೋಗ್ಯಕರ ಆಹಾರ ಸೇವನೆ, ಆರೋಗ್ಯವಾದ ಮನಸ್ಸು, ಆರೋಗ್ಯವಾದ ದೇಹಗಳ ಸಮತೋಲನ ಕಾಯ್ದುಕೊಳ್ಳಬೇಕು. ದುಶ್ಚಟಗಳಿಂದ ದೂರವಿದ್ದು, ಸಮಾಜಮುಖಿ ಕೆಲಸಗಳಲ್ಲಿ ತೊಡಗಿಸಿಕೊಂಡು ಸಮಾಜದ ಮಾದರಿ ವ್ಯಕ್ತಿಗಳನ್ನು ಅನುಕರಣೆ ಮಾಡಿ, ಕುಟುಂಬದ ಸ್ವಾಸ್ಥ್ಯವನ್ನು ಕಾಪಾಡುವಲ್ಲಿ ನಾವೆಲ್ಲರೂ ಮಾದಕ ವಸ್ತುಗಳಿಂದ ದೂರವಿರಬೇಕು ಎಂದರು.

ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಮಾಜಿ ಜಿಲ್ಲಾ ಸದಸ್ಯ ರಮೇಶ್ ಸಜ್ಜಗಾರ ಮಾತನಾಡಿ, ಭಾರತ ದೇಶದ ಸರ್ವತೋಮುಖ ಅಭಿವೃದ್ಧಿಯಲ್ಲಿ ಮಾನವ ಸಂಪನ್ಮೂಲ ಮುಖ್ಯವಾಗಿದೆ.

ನಾವೆಲ್ಲರೂ ದೇಹ ಮತ್ತು ಮನಸ್ಸನ್ನು ಶುದ್ಧೀಕರಿಸಲು ದುಶ್ಚಟಗಳಿಂದ ದೂರವಿದ್ದು, ಧ್ಯಾನ, ಯೋಗ ಮುಂತಾದ ಆರೋಗ್ಯಕರವಾದ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಉಪಾಧ್ಯಕ್ಷರಾದ ಪ್ರತಿಭಾ ತಂಗಡಿ ಮಾತನಾಡಿ, ಸಂಸ್ಥೆಯಲ್ಲಿ ಗುಣಮುಖರಾಗಲು ಬಂದಿರುವ ವ್ಯಸನಿಗಳು ನಮ್ಮ ಕುಟುಂಬದ ಸದಸ್ಯರಿದ್ದಂತೆ. ಅವರನ್ನು ಗುಣಮುಖ ಮಾಡಲು ನಮ್ಮ ಸಂಸ್ಥೆಯ ವೈದ್ಯರು ಹಾಗೂ ಎಲ್ಲ ಸಿಬ್ಬಂದಿಗಳು ಶ್ರಮವಹಿಸುತ್ತಿದ್ದಾರೆ ಎಂದರು.

ವ್ಯಸನಮುಕ್ತಿ ಕೇಂದ್ರದ ಆಪ್ತ ಸಮಾಲೋಚಕಿ ಭಾರತಿ ಕೆಂಚಣ್ಣವರ ಮಾತನಾಡಿ, ಸಂಸ್ಥೆಯ ಗುರಿ ಮತ್ತು ಉದ್ದೇಶಗಳನ್ನು ಹಾಗೂ ಸಂಸ್ಕಾರ, ಸಮಗ್ರ ವ್ಯಸನಮುಕ್ತಿ ಹಾಗೂ ಪುನರ್ವಸತಿ ಕೇಂದ್ರದ ಹಲವಾರು ಕಾರ್ಯಗಳನ್ನು ಪ್ರಸ್ತಾವನೆಯಲ್ಲಿ ಮಾಹಿತಿ ನೀಡಿದರು.

ಕೇಂದ್ರದ ಆಡಳಿತ ಅಧಿಕಾರಿಗಳಾದ ಮಲ್ಲಗೌಡ ತಂಗಡಿ ಉಪಸ್ಥಿತರಿದ್ದರು. ಸುಜಾತಾ ಸ್ವಾಗತಿಸಿದರು. ವೀರೇಶ್ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಅಜಿತ, ದೇವಪ್ಪ ಹಾಗೂ ಎಲ್ಲ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅಳಿಯನ ಜೊತೆ ಓಡಿ ಹೋಗಿದ್ದ ಅತ್ತೆ: ಎರಡು ತಿಂಗಳ ಬಳಿಕ ಒಬ್ಬಳೇ ಬಂದು ಹೈಡ್ರಾಮ - ಗಂಡ-ಮಗಳ ಮೇಲೆ ಗರಂ!

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

55 ವರ್ಷದ ಅತ್ತೆ ಜೊತೆ 25 ವರ್ಷದ ಅಳಿಯ ಓಡಿ ಹೋಗಿರುವ ಘಟನೆ ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲೂಕಿನ ಮುದ್ದೇನಹಳ್ಳಿ ಗ್ರಾಮದಲ್ಲಿ ಜರುಗಿದೆ. ಕಳೆದ ಎರಡು ತಿಂಗಳ ಹಿಂದೆ ನಡೆದಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಗಣೇಶ್ ಹಾಗೂ ಶಾಂತಾ ಓಡಿ ಹೋಗಿದ್ದ ಅತ್ತೆ-ಅಳಿಯ.

ಕಳೆದ ಎರಡು ತಿಂಗಳ ಹಿಂದೆ ಅತ್ತೆ-ಅಳಿಯ ಓಡಿ ಹೋಗಿದ್ದರು. ಆದರೆ ಇದೀಗ ಅಳಿಯನನ್ನು ಬಿಟ್ಟು ಗಂಡನ ಬಳಿ ಬಂದಿರುವ ಆಂಟಿ



ಹೈಡ್ರಾಮ ಸೃಷ್ಟಿ ಮಾಡಿದ್ದಾಳೆ. ಚನ್ನಗಿರಿ ತಾಲೂಕಿನ ಮರವಂಜಿ ಗ್ರಾಮದ ನಿವಾಸಿ ಗಣೇಶ್ ಎಂಬ 25ರ ಯುವಕನ ಜೊತೆ 55 ವರ್ಷದ ಆಂಟಿ ಓಡಿ ಹೋಗಿದ್ದರು. ಈಗ ಗಣೇಶ್ ನನ್ನು ಬಿಟ್ಟು ಒಂಟಿ ಆಗಿ ಬಂದಿರುವ ಆಂಟಿ, ಗಣೇಶ್ ಜೊತೆ ನಾನು ಓಗಿಲ್ಲ ಎಂದು ಹೈಡ್ರಾಮಾ ನಡೆಸಿದ್ದಾಳೆ. ಕಳೆದ ಹದಿನೈದು ದಿನಗಳ ಹಿಂದೆ ಮುದ್ದೆನಹಳ್ಳಿಗೆ ಅತ್ತೆ ಬಂದಿದ್ದು, ಗಂಡ ಮತ್ತು ಮಲಮಗಳು ಹೇಮಾವತಿ ಜೊತೆ ಗಲಾಟೆ ಮಾಡಿದ್ದಾಳೆ.

# ಭ್ರಷ್ಟಾಚಾರವನ್ನು ತನಿಖೆಗೆ ಒಳಪಡಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್ ಆಡಳಿತದಲ್ಲಿ ನಡೆದ ಭ್ರಷ್ಟಾಚಾರ ಹಾಗೂ ಹಗರಣಗಳನ್ನು ತನಿಖೆಗೊಳಪಡಿಸುವಂತೆ ಅವರದೇ ಪಕ್ಷದ ಸದಸ್ಯರು ಮಾಧ್ಯಮಗಳ ಮುಂದೆ ಬಹಿರಂಗವಾಗಿ ಹೇಳಿಕೆ ನೀಡುತ್ತಿದ್ದು ಇದರಿಂದ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸರಕಾರ ಸಂಪೂರ್ಣ ವಿಫಲವಾಗಿದೆ. ಹೀಗಾಗಿ, ರಾಜ್ಯಪಾಲರು ಎಲ್ಲ ಇಲಾಖೆಗಳ ಸಮಗ್ರ ಮಾಹಿತಿ ಪಡೆದುಕೊಂಡು ಸರ್ಕಾರದಲ್ಲಿ ನಡೆದ ಭ್ರಷ್ಟಾಚಾರವನ್ನು ತನಿಖೆಗೆ ಒಳಪಡಿಸಬೇಕೆಂದು ಗದಗ ಜಿಲ್ಲಾ ಜೆಡಿಎಸ್ ಪಕ್ಷದ ಅಧ್ಯಕ್ಷ ಎಂ.ವೈ. ಮುಧೋಳ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್.ಕೊಪ್ಪಳ, ಪಕ್ಷದ ರಾಜ್ಯ ಮುಖಂಡರಾದ ಈರಣ್ಣ ಬಾಳಿಕಾಯಿ, ವೀರಭದ್ರೇಶ ಅಕ್ಕಿ, ಉಪಾಧ್ಯಕ್ಷ ಗಿರೀಶ್ ಸಂಶಿ, ಹಿರಿಯರಾದ ಎಂ.ಎಸ್. ಪರ್ವತಗೌಡ್ರ, ಸಂಗಪ್ಪ ಎಲಬುಣಿಸಿ, ಜಿಲ್ಲಾ ಪದಾಧಿಕಾರಿಗಳು, ತಿಪ್ಪಣ್ಣ ಹುಡೇದ, ದೇವಪ್ಪ ಮಲ್ಲಸಮುದ್ರ, ಲಕ್ಷ್ಮಣ ನಾಯಕ, ಶಿರಾಜ್ ಕದಡಿ, ರಾಜೇಸಾಬ ತಹಸೀಲ್ದಾರ, ಬಾದಶಾ ಭಗವಾನ, ಮೆಹಬೂಬಸಾಬ ಹುಲ್ಲೂರ, ಇಮಾಮ ಹುಸೇನ ಉಮಚಗಿ, ಶ್ರೀನಿವಾಸ್ ಓಂಕಾರ ಮುಂತಾದವರು ಉಪಸ್ಥಿತರಿದ್ದರು.

**ಕಸಾಪ ವತಿಯಿಂದ ಡಾ. ಎಸ್.ಕೆ. ಪಲ್ಲೇದ ದತ್ತಿ ಉಪನ್ಯಾಸ**

# ರೋಗಮುಕ್ತ ಜೀವನಕ್ಕೆ ಯೋಗ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಯೋಗದ ಚಟುವಟಿಕೆಗಳು ವ್ಯಕ್ತಿಯ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಚಿಂತನೆಗಳನ್ನು ಉತ್ತಮಗೊಳಿಸುತ್ತವೆ. ಆರೋಗ್ಯಯುಕ್ತ ಜೀವನ ವ್ಯಕ್ತಿಯ ಮೂಲಭೂತ ಅವಶ್ಯಕತೆಯಾಗಿದ್ದು, ಇದನ್ನು ಯೋಗ ಈಡೇರಿಸುತ್ತದೆ. ಸ್ನಾಯುಗಳನ್ನು ಬಲಪಡಿಸಿ, ಕೀಲುಗಳ ನಮ್ಯತೆಯನ್ನು ಸುಧಾರಿಸುತ್ತದೆ. ಹೀಗಾಗಿ, ಶಾರೀರಿಕ ಶಕ್ತಿ ಬಲಗೊಂಡು ರೋಗಮುಕ್ತ ಜೀವನ ನಡೆಸಲು ಯೋಗ ಸಹಕಾರಿಯಾಗಿದೆ ಎಂದು ಯೋಗಾಚಾರ್ಯ ಕೆ.ಎಸ್. ಪಲ್ಲೇದ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಎಸ್.ವಾಯ್.ಬಿ.ಎಂ. ಎಸ್ ಯೋಗ ಪಾಠಶಾಲೆ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಜರುಗಿದ ಡಾ. ಎಸ್. ಕೆ. ಪಲ್ಲೇದ ಸ್ಮರಣಾರ್ಥ ದತ್ತಿ ಉಪನ್ಯಾಸದಲ್ಲಿ ಮಾತನಾಡಿದರು.



ಯೋಗ ಜಾಗೃತ ಉಸಿರಾಟ ಮತ್ತು ಚಲನೆಗೆ ಒತ್ತು ನೀಡುವದರಿಂದ ಅರಿವು ಉಂಟಾಗುತ್ತದೆ. ಮಾನಸಿಕ ಶಾಂತಿ ನೆಲೆಗೊಳ್ಳುತ್ತದೆ. ಆಧುನಿಕತೆಯ ಈ ಸಂದರ್ಭದಲ್ಲಿ ಮನುಷ್ಯ ದೈಹಿಕವಾಗಿ ಮತ್ತು ಮಾನಸಿಕವಾಗಿ ಒತ್ತಡವನ್ನು ಅನುಭವಿಸುವ ಸ್ಥಿತಿಯಲ್ಲಿರುವದರಿಂದ ಇದಕ್ಕೆ ಯೋಗವೇ ಪರಮ ಔಷಧಿಯಾಗಿದೆ ಎಂದು ತಿಳಿಸಿದರು.

ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಶಾಂತಾದೇವಿ ತುಪ್ಪದ ಮಾತನಾಡಿ, ಸಾಮಾನ್ಯವಾಗಿ ಮಹಿಳೆಯರು ಎದುರಿಸುವ ದೈಹಿಕ ಸಮಸ್ಯೆಗಳನ್ನು ಯೋಗಾಸನಗಳ ಮೂಲಕ ಪರಿಹರಿಸಿಕೊಂಡು ಮಾನಸಿಕ ಸದೃಢತೆಯನ್ನು ಹೊಂದಲು ಸಹಕಾರಿಯಾಗಿದೆ ಎಂದು ತಿಳಿಸಿದರು. ಎಸ್.ಕೆ. ಪಲ್ಲೇದ ಸಂಸ್ಮರಣೆಯನ್ನು ಕಿಶೋರಬಾಬು ನಾಗರಕಟ್ಟಿ ಮಾಡಿದರು. ಯೋಗದ ಮಹತ್ವ ಕುರಿತು ಬಿ.ಎಲ್. ಪತ್ತಾರ ಕವನ ವಾಚಿಸಿದರು. ಯೋಗ ಶಿಬಿರದ ಶಿಕ್ಷಕಿಯರಾದ ಸುನಂದಾ ಜಾನೋಪಂತರ ಹಾಗೂ ಜಯಶ್ರೀ ಡಾವಣಗೇರಿ ಅವರನ್ನು ಸನ್ಮಾನಿಸಲಾಯಿತು. ವೇದಿಕೆ ಮೇಲೆ ಕೆ.ಎಚ್. ಬೇಲೂರ, ವಿಜಯಲಕ್ಷ್ಮಿ ಆನೆಹೊಸೂರ, ರತ್ನಕ್ಕ ಪಾಟೀಲ, ಜಯಶ್ರೀ ಉಗಲಾಟದ ಉಪಸ್ಥಿತರಿದ್ದರು. ಶಿವಲೀಲಾ ಅಕ್ಕಿ ಸ್ವಾಗತಿಸಿದರು. ಸತೀಶ ಚನ್ನಪ್ಪಗೌಡ್ರ ನಿರೂಪಿಸಿದರು. ಅಶೋಕ ಹಾದಿ ವಂದಿಸಿದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಶೆಟ್ಟರ, ಆಶಾ ಪಟ್ಟಣಶೆಟ್ಟಿ, ಅಕ್ಕಮಹಾದೇವಿ ಚಟ್ಟಿ, ರೇಣುಕಾ ಪರ್ವತಗೌಡ್ರ, ಎಸ್.ಎಂ. ವಾರದ, ಲಕ್ಷ್ಮೀ ಸುತಾರ, ಡಿ.ಎಸ್. ಬಾಪುರಿ, ಬಸವರಾಜ ಗಣಪ್ಪನವರ, ಶಿವನಗೌಡ ಗೌಡರ, ಬೂದಪ್ಪ ಅಂಗಡಿ, ಅನ್ನಪೂರ್ಣ ಬಡಿಗಣ್ಣವರ, ರಾಜೇಶ್ವರಿ ಬಡ್ನಿ, ಎಸ್.ಎಸ್. ಗಾಳಪ್ಪನವರ, ಎಲ್.ಟಿ. ಗುಡ್ಡಿಮಠ, ಸುಲೋಚನಾ ಕಾಲವಾಡಮಠ, ಎಸ್.ಸಿ. ಹುಣಶೀಮರದ, ಶೈಲಜಾ ಗಿಡ್ನಂದಿ, ಶಾಂತಾ ಗಣಪ್ಪನವರ, ಶೋಭಾ ಭಾಂಡಗೆ, ಮಹಾದೇವಿ ಚರಂತಿಮಠ, ವಿಜಯಾ ಚೆನ್ನಶೆಟ್ಟಿ, ಅನ್ನಪೂರ್ಣ ಅಸೂಟಿ, ಗಿರಿಜಾ ನಾಲ್ವತ್ತಾಡಮಠ, ಶಂಕರಗೌಡ ಪಾಟೀಲ, ವಿಜಯಲಕ್ಷ್ಮೀ ಉಪವಾಸಿ, ಪ್ರತಿಭಾ ಇನಾಮತಿ, ವೀಣಾ ಅಕ್ಕಿ, ಜಯಶ್ರೀ ವಸ್ತ್ರದ, ವಿ.ಪಿ. ಸವಡಿ, ಅಮೃತೇಶ ಹೊಸಳ್ಳಿ, ಮಲ್ಲಿಕಾರ್ಜುನ ಪಾಟೀಲ, ಬಿ.ಎಂ. ಗೌಡರ, ಎಸ್.ಎಂ. ಬುರಡಿ, ಎಚ್.ಎಂ. ಹಳ್ಳದ, ಎಸ್.ಬಿ. ವಾಲ್ಮೀಕಿ, ರಾಚಪ್ಪ ಮಿಣಜಗಿ, ಎಂ.ಜಿ. ಗಾಡದ, ದೇಸಾಯಿಗೌಡ್ರ ಮೊದಲಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಆರೋಗ್ಯ ಸಂವರ್ಧನೆಯ ಹಿನ್ನೆಲೆಯಲ್ಲಿ ನಿರೂಪಿತವಾಗಿರುವ ಯೋಗದ ಕ್ರಿಯೆಗಳು ಮನುಷ್ಯನ ಸ್ವಾಸ್ಥ್ಯ ಬದುಕಿಗೆ ಅಗತ್ಯವಾಗಿದೆ. ಆರೋಗ್ಯಪೂರ್ಣ ವ್ಯಕ್ತಿತ್ವ ದೇಶದ ಪ್ರಗತಿಗೆ ಪೂರಕವಾಗಿದೆ. ದೊಡ್ಡ ದೊಡ್ಡ ಆಸ್ಪತ್ರೆಗಳು ತಲೆ ಎತ್ತುತ್ತಿವೆ ಎಂದರೆ ಇದು ಆರೋಗ್ಯದ ಬಗ್ಗೆ ಇರುವ ನಮ್ಮ ಅಜ್ಞಾನವನ್ನು ತೋರುತ್ತದೆ. ರೋಗದಿಂದ ಮುಕ್ತವಾಗಿರಲು ಆಹಾರ ಮತ್ತು ಯೋಗಾಸನಗಳ ಮಹತ್ವವನ್ನು ಅರಿಯುವದು ಇಂದಿನ ಅಗತ್ಯವಾಗಿದೆ ಎಂದು ತಿಳಿಸಿದರು.

# ತಾಳೆ ಬೆಳೆ ಸಹಾಯಧನ ಪಡೆಯಲು ಅರ್ಜಿ ಅಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನ ತೆ–ೂಟಗಾರಿಕೆ ಇಲಾಖೆಯ ಕೇಂದ್ರ ಪುರಸ್ಕೃತ ಖಾದ್ಯ ತೈಲ ಅಭಿಯಾನ ತಾಳೆ ಬೆಳೆ ಯೋಜನೆಯಡಿ ತಾಳೆ ಬೆಳೆ ಬೆಳೆಯಲು ರೈತರಿಂದ ಅರ್ಜಿ ಅಹ್ವಾನಿಸಲಾಗಿದೆ ಎಂದು ಗದಗ ತೋಟಗಾರಿಕೆ ಉಪ ನಿರ್ದೇಶಕರು ತಿಳಿಸಿದ್ದಾರೆ.

ನೀರಾವರಿ ಸೌಲಭ್ಯ ಹೊಂದಿರುವ ಫಲಾನುಭವಿಗಳಿಗೆ ಹೊಸ ಪ್ರದೇಶ ವಿಸ್ತರಣೆಗೆ ವಿದೇಶ ಮೂಲ ತಾಳೆ ಸಸಿಗಳಿಗೆ ಪ್ರತಿ ಹೆಕ್ಟರ್‌ಗೆ ರೂ.29000 ಸಹಾಯಧನ ನೀಡಲಾಗುತ್ತದೆ. ಈ ಹಿಂದೆ ಅಭಿವೃದ್ಧಿಪಡಿಸಲಾದ ತಾಳೆ ಬೆಳೆ ತೋಟಗಳ ಮೊದಲನೇ, ಎಡರನೇ, ಮೂರನೇ ಮತ್ತು ನಾಲ್ಕನೇ ವರ್ಷದ ನಿರ್ವಹಣೆಗೆ ಪ್ರತಿ ಹೆಕ್ಟರ್‌ಗೆ ರೂ. 5250 ಮೊತ್ತದ ಸಹಾಯಧನ ನೀಡಲಾಗುತ್ತದೆ. ತಾಳೆ ತೋಟದಲ್ಲಿ ಅಂತರ ಬೆಳೆ ಬೇಸಾಯಕ್ಕೆ ರೂ.5250 ಪ್ರತಿ ಹೆಕ್ಟರ್‌ಗೆ 4 ವರ್ಷಗಳವರೆಗೆ ಸಹಾಯಧನ ನೀಡಲಾಗುವುದು.

ಈಗಾಗಲೇ ಇಳುವರಿ ನೀಡುತ್ತಿರುವ ತಾಳೆ ಬೆಳೆ ತೋಟದಲ್ಲಿ ಕೊಳವೆ ಬಾವಿ ಕೊರೆಸುವ ರೈತರಿಗೆ ರೂ.50 ಸಾವಿರ ಸಹಾಯಧನ ನೀಡಲಾಗುವುದು. ತಾಳೆ ಬೆಳೆ ಕೃಷಿಗೆ ಅಗತ್ಯವಿರುವ ಯಂತ್ರೋಪಕರಣಗಳ ಖರೀದಿಗೆ ಸಾಮಾನ್ಯ ರೈತರಿಗೆ ಶೇ.40ರಷ್ಟು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಮಹಿಳಾ ರೈತರಿಗೆ ಶೇ.50ರಂತೆ ಗರಿಷ್ಠ 2 ಲಕ್ಷ ಮೀರದಂತೆ ಸಹಾಯಧನ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು–ಗದಗ (ಜಿ.ಪಂ) ಮೊ. ನಂ–7019962602, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು–ಮುಂಡರಗಿ (ಜಿ.ಪಂ) ಮೊ. ನಂ–8884609727, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು–ನರಗುಂದ (ಜಿ.ಪಂ) ಮೊ. ನಂ– 9164878067, ಪ್ರ. ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು–ರೋಣ (ಜಿ.ಪಂ) ಮೊ. ನಂ–9886215054, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಶಿರಹಟ್ಟಿ (ಜಿ.ಪಂ) ಮೊ. ನಂ–9036617999ಗೆ ಸಂಪರ್ಕಿಸಬಹುದು ಎಂದು ಗದಗ (ಜಿ.ಪಂ) ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಪ್ಪತಗುಡ್ಡ ಸಂರಕ್ಷಣೆಗೆ ಅಂತಿಮ ಅನುಮತಿ ಹೋರಾಟಗಾರರ ಕನಸು ನನಸಾಗಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ಕಪ್ಪತಗುಡ್ಡ ಸಂರಕ್ಷಣೆಗಾಗಿ ಕೇಂದ್ರದಿಂದ ಅಂತಿಮ ಅನುಮತಿಯನ್ನು ಪಡೆದಿದ್ದು, ರಾಜ್ಯ ಸರ್ಕಾರ ಹಾಗೂ ಸಚಿವ ಹೆಚ್.ಕೆ. ಪಾಟೀಲರ ಸತತ ಪ್ರಯತ್ನದಿಂದ ಜಗದ್ಗುರು ಸಿದ್ದಲಿಂಗ ಮಹಾಸ್ವಾಮಿಗಳೂ ಸೇರಿದಂತೆ ಹಲವಾರು ಹೋರಾಟಗಾರರ ಕನಸು ನನಸಾಗಿದೆ ಎಂದು ಅಖಿಲ ಕರ್ನಾಟಕ ಜನಶಕ್ತಿ ವೇದಿಕೆ ರಾಜ್ಯಾಧ್ಯಕ್ಷರಾದ ಸೈಯದ್ ಖಾಲಿದ್ ಕೊಪ್ಪಳ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಶ್ರೀ ನಂದಿ ಸ್ವಾಮಿಗಳು, ಶ್ರೀ ತೋಂಟದ ಸಿದ್ದಲಿಂಗ ಸ್ವಾಮಿಗಳ ಜೊತೆಗೆ ಕಪ್ಪತಗುಡ್ಡ ರಕ್ಷಣೆಗಾಗಿ ಹೋರಾಟವನ್ನು ಮಾಡಿದರು. ಹಲವಾರು ಕನ್ನಡಪರ, ದಲಿತಪರ ಸಂಘಟನೆಗಳು ಪ್ರಾಮಾಣಿಕವಾಗಿ ಹೋರಾಟಗಳಲ್ಲಿ ಪಾಲ್ಗೊಂಡು ಕಪ್ಪತಗುಡ್ಡ ರಕ್ಷಣೆಗಾಗಿ ಹೋರಾಟ ಮಾಡಿದ್ದಾರೆ. ಆ ಎಲ್ಲ ಹೋರಾಟಗಾರರಿಗೆ ಇಂದು ಗೆಲುವು ಸಿಕ್ಕಂತಾಗಿದೆ ಎಂದು ಅವರು ಹೇಳಿದ್ದಾರೆ.

**ಕಾಂಗ್ರೆಸ್ ಕಚ್ಚಾಟದಲ್ಲಿ ರಾಜ್ಯ ಅಭಿವೃದ್ಧಿ ಶೂನ್ಯವಾಗಿದೆ: ಬಸವರಾಜ ಬೊಮ್ಮಾಯಿ**

# ಹುಲಿಗಳ ಸಾವು ಸಂಪೂರ್ಣ ತನಿಖೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಹುಲಿಗಳ ಸಾವಿಗೆ ಅರಣ್ಯ ಇಲಾಖೆ ನಿರ್ಲಕ್ಷ್ಯವೇ ಕಾರಣವಾಗಿದ್ದು, ಈ ಬಗ್ಗೆ ಸಂಪೂರ್ಣ ತನಿಖೆಯಾಗಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹುಲಿಗಳ ಬಗ್ಗೆ ಸಮಾಜ ಮತ್ತು ಸರ್ಕಾರ ಎರಡೂ ಬಹಳ ಪ್ರಾಮುಖ್ಯತೆ ಕೊಡುತ್ತವೆ. ಯಾವುದಾದರೂ ಒಂದು ಹುಲಿ ಆಕಸ್ಮಿಕವಾಗಿ ಸಾವಿಗೀಡಾದರೆ ಬಹಳ ದೊಡ್ಡ ವಿಚಾರ. ಅಂತಹದ್ದರಲ್ಲಿ ತಾಯಿ ಹುಲಿ ಹಾಗೂ ನಾಲ್ಕು ಮರಿಗಳು ಸಾವಿಗೀಡಾಗಿರುವುದು ಆಘಾತಕಾರಿಯಾಗಿರುವ ವಿಷಯ. ಇಷ್ಟು ದೊಡ್ಡ ಪ್ರಮಾಣದ ಅನಾಹುತ ಆಗಿದೆಯೆಂದರೆ ಅರಣ್ಯ ಇಲಾಖೆಯ ನಿರ್ಲಕ್ಷ್ಯ ಬಹಳ ಸ್ಪಷ್ಟವಾಗಿದೆ. ಹುಲಿ ಸಂರಕ್ಷಿತ ಅರಣ್ಯ ಪ್ರದೇಶದಲ್ಲಿ ಬಹಳಷ್ಟು ಜನದಟ್ಟಣೆಗೆ ಅವಕಾಶ ಮಾಡಿಕೊಡುತ್ತಿದ್ದಾರೆ. ಹುಲಿ ಅರಣ್ಯ ಪ್ರದೇಶದ ಪಕ್ಕದಲ್ಲಿಯೇ ರೆಸಾರ್ಟ್ ಗೆ ಅನುಮತಿ ನೀಡಿದ್ದಾರೆ. ಹುಲಿ ಸಂರಕ್ಷಿತ ಅರಣ್ಯದ ಬಳಿಯೇ ಜನರು ಪಿಕ್ ನಿಕ್ ಹೋಗುತ್ತಾರೆ. ಇಷ್ಟೆಲ್ಲಾ ಆದರೂ ಕೂಡ ಅರಣ್ಯ ಇಲಾಖೆಯವರು ಕಣ್ಣು ಮುಚ್ಚಿಕೊಂಡು ಕುಳಿತಿದ್ದಾರೆ ಎಂದು ಆರೋಪಿಸಿದರು.

**ಅಧಿಕಾರಿಗಳನ್ನು ಕಾಡಿಗೆ ಕಳಿಸಿ**

ಭಾರತೀಯ ಅರಣ್ಯ ಸೇವಾ ಅಧಿಕಾರಿಗಳನ್ನು ಬೆಂಗಳೂರಿನಿಂದ ಅರಣ್ಯಕ್ಕೆ ಕಳಿಸಬೇಕು. ನಾವಿದ್ದಾಗ ಎಲ್ಲ ಅರಣ್ಯ ಇಲಾಖೆ ಕಚೇರಿಗಳನ್ನು ಅರಣ್ಯ ಇರುವ ಕಡೆ ಸ್ಥಳಾಂತರ ಮಾಡಿದ್ದೇವು. ಈಗ ಮತ್ತೆ ಬೆಂಗಳೂರಿಗೆ ಸ್ಥಳಾಂತರಿಸಿದ್ದಾರೆ. ಬಹುತೇಕ ಐಎಫ್ ಎಸ್ ಅಧಿಕಾರಿಗಳು ಬೆಂಗಳೂರಿನಲ್ಲಿಯೇ ಇದ್ದಾರೆ. ಗಾರ್ಡ್ ಗಳನ್ನು ಬಿಟ್ಟರೆ ಯಾರೂ ಕಾಡು ಕಾಯುವವರಿಲ್ಲ. ಎಲ್ಲ ಐಎಫ್‌ಎಸ್ ಅಧಿಕಾರಿಗಳು ಬರುತ್ತಾರೆ. ಬೇರೆ ಬೇರೆ ಹುದ್ದೆಗಳನ್ನು ಸೃಷ್ಟಿಸಿ ಬೆಂಗಳೂರಿನಲ್ಲಿಯೇ ಉಳಿಯುತ್ತಾರೆ. ಕಾಡಿನ ಬಗ್ಗೆ ಗಂಭೀರ ಆಡಳಿತ ನಡೆಸುವವರು ಯಾರು. ಅರಣ್ಯ ನಾಶ, ಅಕ್ರಮವಾಗಿ ಕಳ್ಳಸಾಗಾಣಿಕೆಯಾಗುತ್ತಿದೆ. ಮಾನವ ಮತ್ತು ಪ್ರಾಣಿಗಳ ನಡುವೆ ಸಂಘರ್ಷ ಉಂಟಾಗುತ್ತಿದೆ. ರೆಸಾರ್ಟ್ ಗಳು, ಜನದಟ್ಟಣೆ ಹೆಚ್ಚಾಗುತ್ತಿದೆ. ಇದಲ್ಲದೇ ಕಾಂಗ್ರೆಸ್ ಮಹಾನಾಯಕಿ ಆದೇಶದ ಹಿನ್ನೆಲೆಯಲ್ಲಿ ಬನ್ನೇರುಘಟ್ಟ ರಸ್ತೆಯಲ್ಲಿ ರಾತ್ರಿ ವಾಹನ ಸಂಚಾರಕ್ಕೆ ಅವಕಾಶ ಕೊಡಬೇಕು ಎಂಬ ಒತ್ತಡ ಇದೆ. ಹುಲಿಗಳ ಸಾವು ಸಂಪೂರ್ಣ ನಿರ್ಲಕ್ಷ್ಯವೇ ಕಾರಣ ಇದರ ಬಗ್ಗೆ ಸಂಪೂರ್ಣ ತನಿಖೆ ಆಗಬೇಕು. ಯಾರು ತಪ್ಪಿತಸ್ಥರಿದ್ದಾರೆ ಅವರ ಮೇಲೆ ಕ್ರಮ ಆಗಬೇಕು. ಹಿಂದೆ ಹುಲಿಗಳ ಚರ್ಮಕ್ಕಾಗಿ ಹುಲಿಗಳನ್ನು ಸಾಯಿಸಲಾಗುತ್ತಿತ್ತು. ಅಂತಹ ಘಟನೆ ಆಗಿದಿಯೋ ಇಲ್ಲವೋ ತಿಳಿಯಲು ಸಂಪೂರ್ಣ ತನಿಖೆ ಆಗಬೇಕು ಎಂದು ಆಗ್ರಹಿಸಿದರು.

# ಜಗದಂಬಾ ಸರಸ್ವತಿಯವರು ಮಾಹಾನ್ ತಪಸ್ವಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ವಿಶಾಲ ಹೃದಯದ, ಸಹನಾ ಮೂರ್ತಿಯಾಗಿದ್ದ ಜಗದಂಬಾ ಸರಸ್ವತಿಯವರು ಓಂ ಮಂಡಳಿ ಸ್ಥಾಪನೆ ಮಾಡುವುದರ ಮೂಲಕ ಇಂದಿನ ಬ್ರಹ್ಮಕುಮಾರಿಯರಿಗೆ ದಾರಿ ದೀಪವಾಗಿದ್ದಾರೆ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಧಾರವಾಡ ವಿಭಾಗದ ಸಂಚಾಲಕರಾದ ಬಿ.ಕೆ. ಜಯಂತಿ ಅಕ್ಕನವರು ಹೇಳಿದರು.

ಇಲ್ಲಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಶಾಖೆಯಲ್ಲಿ ಶಿವ ಪಾರ್ವತಿ ಯೋಗ ಫೌಂಡೇಶನ್, ಅನ್ನಪೂರ್ಣೇಶ್ವರಿ ಸತ್ಸಂಗ ಸಮಿತಿಯ ಸಂಯುಕ್ತ ಆಶ್ರಯದಲ್ಲಿ ನಡೆದ ಓಂ ಮಂಡಳಿ ಸ್ಥಾಪಕಿ ಜಗದಂಬಾ ಸರಸ್ವತಿಯವರ 61ನೇ ಸ್ಮೃತಿ ದಿನ ಹಾಗೂ ಯೋಗ ಶಿಬಿರ ಸಮಾರೋಪದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದರು.



ಇಂದು ಪ್ರಪಂಚದಾದ್ಯಂತ 45 ಸಾವಿರ ಬ್ರಹ್ಮಕುಮಾರಿಯವರು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಸ್ಥೆಯಲ್ಲಿ ಆಧ್ಯಾತ್ಮಿಕ ಪ್ರವಚನವನ್ನು ನೀಡುತ್ತಿದ್ದಾರೆ. ತಮ್ಮ 15ನೇ ವಯಸ್ಸಿನಲ್ಲಿ ಯಜ್ಞಕ್ಕೆ ಪಾದರ್ಪಣೆ ಮಾಡಿದ ಜಗದಂಬಾ ಅವರು ಕಡಿಮೆ ಅವಧಿಯಲ್ಲಿ ಹೆಚ್ಚಿನ ಪುರುಷಾರ್ಥ ಸಾಧಿಸಿದರು. ಮಾಹಾನ್ ತಪಸ್ವಿಯಾಗಿದ್ದ ಅವರು ಪ್ರತಿ ಕ್ಷಣ ಅಂತಿಮ ಕ್ಷಣವೆಂದು ಜೀವನ ನಡೆಸಿದವರು ಎಂದರು.

ಯೋಗ ಸಾಧಕ, ತರಬೇತುದಾರ ಸಿದ್ದಣ್ಣ ಜವಳಿ ಮಾತನಾಡಿ, ಯೋಗವು ಭೋದನೆಯ ವಿಜ್ಞಾನ ಅಲ್ಲ. ಸಾಧನೆ ವಿಜ್ಞಾನವಾಗಿದ್ದು, ಔಷಧಿರಹಿತ ಚಿಕಿತ್ಸೆಯಾಗಿದೆ. ನಿರಂತರ ಸಾಧನೆಯಿಂದ ಈಗ ಜಗತ್ತಿನಲ್ಲಿ ಅತಿಯಾಗಿ ದುಷ್ಪರಿಣಾಮ ಬೀರುತ್ತಿರುವ ರಕ್ತದೊತ್ತಡ, ಮಧುಮೇಹ, ಥೈರಾಯ್ಡ್ ರೋಗವನ್ನು ಗುಣಪಡಿಸಬಹುದಾಗಿದೆ. ದೇಹ ಒಂದು ತಾಮ್ರದ ಪಾತ್ರೆಯಾಗಿದ್ದು, ಯೋಗ ಸಾಧನೆಯಿಂದ ನಿತ್ಯ ತೊಳೆದರೆ ಪರಮಾತ್ಮನ ಪ್ರೀತಿಗೆ ಪಾತ್ರರಾಗುತ್ತೇವೆ ಎಂದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ.85ರಷ್ಟು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಶಾಖೆಯ ಸಂಚಾಲಕಿ ಬಿ.ಕೆ. ಸರೋಜಕ್ಕ ಅವರು ಸ್ವಾಗತಿಸಿದರು. ನಿವೃತ್ತ ಪ್ರಾಚಾರ್ಯ ಆರ್.ಎನ್. ಗೌಡರ ನಿರೂಪಿಸಿ ವಂದಿಸಿದರು.

# ಬಿ.ಎಸ್. ಪಾಟೀಲರಿಗೆ 'ನಾಡಪ್ರಭು ಕೆಂಪೇಗೌಡ ಪ್ರಶಸ್ತಿ'

■ವಿಜಯಸಾಕ್ಷಿ ಸುದ್ದಿ, ಡಂಬಳ

ಬೆಂಗಳೂರು ಮಹಾನಗರ ಪಾಲಿಕೆಯು (BBMP) ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಹೆಸರಿನಲ್ಲಿ ಪ್ರತಿ ವರ್ಷ ಮಾಧ್ಯಮ, ಸಿನಿಮಾ, ಸಂಗೀತ, ಸಮಾಜಸೇವೆ, ಸಾರ್ವಜನಿಕ ಆಡಳಿತ ಸೇರಿದಂತೆ ವಿವಿಧ ರಂಗದ ಸಾಧಕರನ್ನು ಗುರುತಿಸಿ ಕೆಂಪೇಗೌಡ ಪ್ರಶಸ್ತಿ ನೀಡುತ್ತಿದ್ದು, ಈ ಬಾರಿ ವಿವಿಧ ರಂಗದ 52 ಸಾಧಕರನ್ನು ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗಿದೆ.



ಕರ್ನಾಟಕ ರಾಜ್ಯ ಸರಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿಗಳು, ಬ್ರ್ಯಾಂಡ್ ಬೆಂಗಳೂರು ಯೋಜನಾ ಸಮಿತಿಯ ಅಧ್ಯಕ್ಷರಾದ ಬಿ.ಎಸ್. ಪಾಟೀಲ್, ಗಾಯಕಿ ಸಂಗೀತಾ ಕಟ್ಟಿ, ಹಿರಿಯ ಪತ್ರಕರ್ತ ದೀಪಕ್ ತಿಮ್ಮಯ್ಯ, ಸುಪ್ರೀಂ ಕೋರ್ಟ್ ವಕೀಲರಾದ ಶ್ಯಾಮಸುಂದರ್ ಸೇರಿದಂತೆ 52 ಸಾಧಕರನ್ನು ಈ ಬಾರಿ ಕೆಂಪೇಗೌಡ ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗಿದೆ.

**ದ್ವೇಷ ಭಾಷಣ ಮಾಡುವವರ ವಿರುದ್ಧ, ಜನರ–ರಾಜ್ಯದ ನೆಮ್ಮದಿ ಕೆಡಿಸುವವರ ವಿರುದ್ಧ ಸ್ವಯಂಪ್ರೇರಿತ ಕ್ರಮ ಏಕೆ ತೆಗೆದುಕೊಳ್ಳುತ್ತಿಲ್ಲ: ಅಧಿಕಾರಿಗಳಿಗೆ ಖಾರವಾಗಿ ಪ್ರಶ್ನಿಸಿದ ಸಿ.ಎಂ!**

# ಪೊಲೀಸರ ತನಿಖೆಯ ಗುಣಮಟ್ಟ ಹೆಚ್ಚಿಸಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಅಪರಾಧಗಳ ಪ್ರಮಾಣ ಕಡಿಮೆ ಆಗಿರುವುದು ಸಮಾಧಾನದ ಸಂಗತಿಯಾದರೂ ಪೊಲೀಸರ ತನಿಖೆಯ ಗುಣಮಟ್ಟ ಕಡಿಮೆಯಾಗಿದ್ದು ಇದನ್ನು ಹೆಚ್ಚಿಸಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚಿಸಿದರು.

ರಾಜ್ಯ ಪೊಲೀಸ್ ಮಹಾ ನಿರ್ದೇಶಕರ ಕಚೇರಿಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆ ಮತ್ತು ಪೊಲೀಸ್ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಈ ಸೂಚನೆಗಳನ್ನು ನೀಡಿದರು.

ಬೀದರ್ ನಲ್ಲಿ ನಡೆದ ದ–ರೋಡೆ ಪ್ರಕರಣದ ಆರೋಪಿ ಯಾರು ಎಂದು ಗೊತ್ತಾಗಿದ್ದರೂ 5 ತಿಂಗಳುಗಳಿಂದ ಆತನನ್ನು ಬಂಧಿಸದೇ ಇರುವುದನ್ನು ಉಲ್ಲೇಖಿಸಿ ಹೇಳಿದರು.





ಬಿಡಿ ಬಿಡಿ ಪ್ರಕರಣಗಳಲ್ಲಿ ತನಿಖೆಯ ಗುಣಮಟ್ಟ ಹೆಚ್ಚಿದ್ದರೂ ಒಟ್ಟಾರೆಯಾಗಿ ಗಮನಿಸಿದಾಗ ತನಿಖೆಯ ಗುಣಮಟ್ಟ ಕುಸಿದಿರುವುದು ಸ್ಪಷ್ಟವಾಗುತ್ತಿದೆ ಎಂದರು.

ಅಪರಾಧ ಪ್ರಕರಣಗಳಲ್ಲಿ ಆರೋಪ ಪಟ್ಟಿಯನ್ನು ಸೂಕ್ತವಾಗಿ, ಪರಿಣಾಮಕಾರಿಯಗಿ, ಸರಿಯಾದ ಸಮಯಕ್ಕೆ ಸಲ್ಲಿಸದಿರುವುದೂ ದೊಡ್ಡ ವೈಫಲ್ಯ. ಇಂಥಾದ್ದನ್ನು ಸಹಿಸಲು ಸಾಧ್ಯವಿಲ್ಲ ಎಂದರು.

ಮಂಗಳೂರು ಮಾತ್ರ ಹದಗೆಟ್ಟಿದ್ದೇಕೆ?

ದ್ವೇಷ ಭಾಷಣ ಮಾಡುವವರ ವಿರುದ್ಧ, ಜನರ–ರಾಜ್ಯದ ನೆಮ್ಮದಿ ಕೆಡಿಸುವವರ ವಿರುದ್ಧ ಸ್ವಯಂಪ್ರೇರಿತ ಕ್ರಮ ಏಕೆ ತೆಗೆದುಕೊಳ್ಳುತ್ತಿಲ್ಲ, ನೀವು ಕ್ರಮ ತೆಗೆದುಕೊಳ್ಳದಿದ್ದರೆ ನಾವು ನಿಮ್ಮ ವಿರುದ್ಧ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಖಾರವಾಗಿ ಪ್ರಶ್ನಿಸಿದರು.

ಕೋಮು ಘರ್ಷಣೆ ಮತ್ತು ಕೊಲೆಗಳು ದಕ್ಷಿಣ ಕನ್ನಡ ಜಿಲ್ಲೆಯಲ್ಲೇ ಹೆಚ್ಚಾಗಿ ಆಗುತ್ತಿದೆ. ಇತರೆ ಜಿಲ್ಲೆಗಳಲ್ಲಿ ಯಾಕೆ ಆಗುತ್ತಿಲ್ಲ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ದಕ್ಷಿಣ ಕನ್ನಡ ಜಿಲ್ಲೆಯ ನೆಮ್ಮದಿ ಕೆಡಿಸುವವರನ್ನು ಮೂಲದಿಂದಲೇ ಪತ್ತೆ ಹಚ್ಚಿ ಅವನು ಯಾರೇ ಇದ್ದರೂ ಕಠಿಣ ಕಾನೂನು ಕ್ರಮ ಕೈಗೊಳ್ಳಿ ಎಂದು ಸ್ಪಷ್ಟ ಸೂಚನೆ ನೀಡಿದರು.

ನಾವು ವ್ಯವಸ್ಥೆಯನ್ನು ದೂಷಿಸಿಕೊಂಡು ಕೈ ಕಟ್ಟಿಕೊಂಡು ಕೂರೋದಲ್ಲ. ಪೊಲೀಸ್ ಠಾಣೆಗಳು ಜನಸ್ನೇಹಿ ಆಗುವ ಜೊತೆಗೆ ಅಪರಾಧ ಮನಸ್ಥಿತಿಯವರಿಗೆ ಕಾನೂನಿನ ಬಗ್ಗೆ ಭಯ ಇರುವ ವಾತಾವರಣ ಸೃಷ್ಟಿಸಬೇಕು ಎಂದು ಕರೆ ನೀಡಿದರು.

ಗೃಹ ಸಚಿವರಾದ ಜಿ.ಪರಮೇಶ್ವರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಗೃಹ ಇಲಾಖೆ ಎಸಿಎಸ್ ಗೌರವ್ ಗುಪ್ತ, ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾದ ಡಾ.ಎ.ಎಂ ಸಲೀಂ ಅವರು ಉಪಸ್ಥಿತರಿದ್ದರು.



ಕರ್ನಾಟಕ ವಿಧಾನ ಮಂಡಲದ ಅರ್ಜಿ ಹಾಗೂ ವಸತಿ ಸಮಿತಿಯ ಸದಸ್ಯರೊಂದಿಗೆ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರು ಕೇಂದ್ರಾಡಳಿತ ಪ್ರದೇಶವಾದ ಧಿಯುಧಮನ್ ಹಾಗೂ ಲಕ್ಷದ್ವೀಪಕ್ಕೆ ಭೇಟಿ ನೀಡಿ ಅಲ್ಲಿನ ಆಡಳಿತಾಧಿಕಾರಿ, ಗುಜರಾತ್‌ನ ಮಾಜಿ ಸಚಿವ ಪ್ರಫುಲ್ ಪಟೇಲ್‌ರವರನ್ನು ಸೌಹಾರ್ದಯುತವಾಗಿ ಭೇಟಿ ಮಾಡಿ ಆಡಳಿತಾತ್ಮಕ ವಿಚಾರಗಳ ಕುರಿತು ಚರ್ಚಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಉಪಸಭಾಪತಿಗಳಾದ ಎಂ.ಕೆ. ಪ್ರಾಣೇಶ ಹಾಗೂ ಸದಸ್ಯರುಗಳಾದ ಡಿ.ಎಸ್. ಅರುಣ, ಸುಜಾ ಕುಶಾಲಪ್ಪ, ಬಿ.ಜಿ. ಪಾಟೀಲ, ಮಧು ಮಾದೇಗೌಡ ಉಪಸ್ಥಿತರಿದ್ದರು.

# ಮಂಡ್ಯದಲ್ಲಿ 15 ಅಡಿ ಉದ್ದದ ಹೆಬ್ಬಾವು ಸೆರೆ; ಅರಣ್ಯ ಸಿಬ್ಬಂದಿಯಿಂದ ರಕ್ಷಣೆ!

■ವಿಜಯಸಾಕ್ಷಿ ಸುದ್ದಿ, ಮಂಡ್ಯ

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಡಿ.ಹಲಸಹಳ್ಳಿ ಗ್ರಾಮದ ಜಮೀನೊಂದರಲ್ಲಿ 15 ಅಡಿ ಉದ್ದದ ಭಾರೀ ಗಾತ್ರದ ಹೆಬ್ಬಾವು ಸೆರೆಯಾಗಿರುವ ಘಟನೆ ಜರುಗಿದೆ. ಇದೇ ಗ್ರಾಮದ ರೈತ ಜಗದೀಶ್ ಎಂಬುವರ ಜಮೀನಿನಲ್ಲಿ ಭಾರೀ ಗಾತ್ರದ ಹೆಬ್ಬಾವು ಪತ್ತೆಯಾಗಿದೆ.

ಕೂಡಲೇ ಹೆಬ್ಬಾವು ಕಂಡ ರೈತ ಭಯಭೀತರಾಗಿ ಅರಣ್ಯ ಇಲಾಖೆಗೆ ಮಾಹಿತಿ ಕೊಟ್ಟಿದ್ದಾರೆ. ಮಾಹಿತಿ ಆಧರಿಸಿ ಉರಗ ತಜ್ಞ ಜಗದೀಶ್ ಜೊತೆ ಅರಣ್ಯ ಅಧಿಕಾರಿ ಸ್ಥಳಕ್ಕೆ ಧಾವಿಸಿ, ಭಾರೀ ಉದ್ದದ ಹೆಬ್ಬಾವು ರಕ್ಷಣೆ ಮಾಡಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka